ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ   NIMMURU SUDDI

ಸಂಪಾದಕರು: ಸುಂದರ್   Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 245 RNI Number : KNKAN/25/A2770 17-09-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :245 ರಾಯಚೂರು 17-09-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಸೆ.18ರಂದು ಭಿಕ್ಷಂ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ

ರಾಯಚೂರು,ಸೆ.16-

ಜಿಲ್ಲೆಯಲ್ಲಿಯೇ ಸಂಪೂರ್ಣ ಚಿತ್ರೀಕರಣಗೊಂಡಿರುವ ಭಿಕ್ಷಂ ಕನ್ನಡ ಚಲನಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ ಕಾರ್ಯಕ್ರಮವು ಸೆ.18ರಂದು ಸಂಜೆ ರಾಯಚೂರು ನಗರದ ವೀರ ಸಾವರ್ಕರ್ ಗಣೇಶೋತ್ಸವದ ವೇದಿಕೆಯಲ್ಲಿ ಅದ್ದೂರಿಯಾಗಿ ನಡೆಯಲಿದೆ ಎಂದು ಚಿತ್ರದ ನಟ ಹಾಗೂ ಸಹ ನಿರ್ದೇಶಕ ಅಣ್ಣಪ್ಪ ಮೇಟಿಗೌಡ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಂಶಿ ಎಡೆದೊರೆ ನಿರ್ದೇಶನದಲ್ಲಿ ಹಾಗೂ ಅಣ್ಣಪ್ಪ ಮೇಟಿಗೌಡ ಸಹ ನಿರ್ದೇಶನದಲ್ಲಿ ಭಿಕ್ಷಂ ಚಿತ್ರ ಮೂಡಿಬರುತ್ತಿದ್ದು, ಪ್ರಮುಖ ಪಾತ್ರದಲ್ಲಿ ತಿರುಪತಿ ಜೋಶಿ ಅವರು ಕಾಣಿಸಿಕೊಳ್ಳಲಿದ್ದಾರೆ. ಚಿತ್ರದ ಬಹುತೇಕ ಚಿತ್ರೀಕರಣವನ್ನು ರಾಯಚೂರು ಜಿಲ್ಲೆಯ ವಿವಿಧ ಸ್ಥಳಗಳಲ್ಲಿಯೇ ನಡೆಸಲಾಗಿದ್ದು, ಜಿಲ್ಲೆಯ ಸ್ಥಳೀಯ ಕಲಾವಿದರೇ ಹೆಚ್ಚಿನ ಸಂಖ್ಯೆಯಲ್ಲಿ ಚಿತ್ರದಲ್ಲಿ ಅಭಿನಯಿಸಿರುವುದು ಚಿತ್ರದ ವಿಶೇಷತೆಯಾಗಿದೆ ಎಂದರು.

ಸ್ಥಳೀಯವಾಗಿ ನಿರ್ಮಾಣಗೊಂಡಿರುವ ಭಿಕ್ಷಂ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನ್ನು ರಾಯಚೂರಿನಲ್ಲಿಯೇ ಬಿಡುಗಡೆ ಮಾಡಲು ಚಿತ್ರತಂಡ ತೀರ್ಮಾನಿಸಿದೆ. ಸೆ.18ರಂದು ಸಂಜೆ ನಡೆಯಲಿರುವ ಕಾರ್ಯಕ್ರಮದಲ್ಲಿ ಗಣ್ಯರು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣಗೊಳ್ಳಲಿದೆ ಎಂದು ಹೇಳಿದರು.

ಚಿತ್ರದ ಡಿಐ, ಸಿಜಿಐ, 5.1 ಸೌಂಡ್ ಹಾಗೂ ಹಿನ್ನೆಲೆ ಸಂಗೀತದ ಕೆಲಸಗಳನ್ನು ಬೆಂಗಳೂರು ಮತ್ತು ಚೆನ್ನೈನಲ್ಲಿ ಪೂರ್ಣಗೊಳಿಸಲಾಗುತ್ತಿದೆ. ನವೆಂಬರ್ ತಿಂಗಳಲ್ಲಿ ಸುಕ್ಷೇತ್ರ ಮಂತ್ರಾಲಯದ ಶ್ರೀಮಠದಲ್ಲಿ ಚಿತ್ರದ ಟ್ರೈಲರ್ ಬಿಡುಗಡೆ ಮಾಡಲು ಚಿತ್ರತಂಡ ಯೋಜನೆ ರೂಪಿಸಿದೆ. ಇದೇ ವರ್ಷದ ಅಂತ್ಯದೊಳಗೆ ಭಿಕ್ಷಂ ಚಿತ್ರವನ್ನು ಪ್ರೇಕ್ಷಕರ ಮುಂದೆ ತರುವ ಉತ್ಸಾಹದಲ್ಲಿದ್ದೇವೆ ಎಂದು ಮೇಟಿಗೌಡ ತಿಳಿಸಿದರು.

ನಂತರ ಮಾತನಾಡಿದ ಚಿತ್ರದ ನಿರ್ದೇಶಕ ವಂಶಿ ಎಡೆದೊರೆ, ಪ್ರಸ್ತುತ ದಿನಮಾನದಲ್ಲಿನ ಸಾಮಾಜಿಕ ಸಮಸ್ಯೆಗಳು, ರಾಯಚೂರು ಜಿಲ್ಲೆಯ ನೆಲ, ಜನಜೀವನ ಹಾಗೂ

3 ನೇ ಪುಟಕ್ಕೆ

ಜನರನ್ನು ಪಶುಗಳಿಗಿಂತ ಕೀಳಾಗಿ ಕಾಣುವ ರಾಜಕಾರಣಿಅಧಿಕಾರಿಗಳು-ರಾಮನಗೌಡ

ರಾಯಚೂರು,ಸೆ.16-

ನಗರದ ಜನರ ಮೂಲಭೂತ ಸಮಸ್ಯೆಗಳಿಗೆ ರಾಜಕಾರಣಿಗಳು ಹಾಗೂ ಅಧಿಕಾರಿಗಳು ಕಿಂಚಿತ್ತೂ ಸ್ಪಂದಿಸುತ್ತಿಲ್ಲ. ಜನರನ್ನು ಪಶುಗಳಿಗಿಂತ ಕೀಳಾಗಿ ಕಾಣುವ ರೀತಿಯಲ್ಲಿ ಆಡಳಿತ ನಡೆಸಲಾಗುತ್ತಿದೆ ಎಂದು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಆರೋಪಿಸಿದರು.

ರಾಯಚೂರು ಜಿಲ್ಲಾ ಜೆಡಿಎಸ್ ನೇತೃತ್ವದಲ್ಲಿ ನಗರದ ವಾರ್ಡ್ ನಂ.22ರಲ್ಲಿ ನಡೆದ ವಾರ್ಡ್‌ಗಳ ಸಮಸ್ಯೆಗೆ ಪರಿಹಾರ ಯಾವಾಗ? ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಗರ ಶಾಸಕ ಡಾ. ಶಿವರಾಜ ಪಾಟೀಲ್ ಹಾಗೂ ಕಾಂಗ್ರೆಸ್ ಮುಖಂಡ ರವಿ ಬೋಸರಾಜು ವಿರುದ್ಧ ವಾಗ್ದಾಳಿ ನಡೆಸಿದರು.



15 ವರ್ಷಗಳಿಂದ ಶಾಸಕರಾಗಿರುವ ಡಾ. ಶಿವರಾಜ ಪಾಟೀಲ್ ಅವರಿಗೆ ವಾರ್ಡ್‌ಗಳಿಗೆ ಸಮರ್ಪಕ ಕುಡಿಯುವ ನೀರು, ಚರಂಡಿ ಹಾಗೂ ಸುರಕ್ಷಿತ ಶೌಚಾಲಯ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗಿಲ್ಲ. ಹಾಗಾದರೆ ಇಷ್ಟು ವರ್ಷಗಳ ಅಧಿಕಾರ ಯಾರಿಗಾಗಿ? ಎಂದು ಪ್ರಶ್ನಿಸಿದರು.

ಮೂರು ವರ್ಷ ಸಚಿವರಾಗಿದ್ದ ಎನ್.ಎಸ್. ಬೋಸರಾಜು ಅವರ ಪುತ್ರ ರವಿ ಬೋಸರಾಜು ವಾರ್ಡ್ ವಾಚ್ ಹೆಸರಿನಲ್ಲಿ ಓಡಾಡುತ್ತಿದ್ದಾರೆ. ನಿಜವಾಗಿಯೂ ವಾರ್ಡ್‌ಗಳ ಸಮಸ್ಯೆಗಳನ್ನು ವಾಚ್ ಮಾಡುವ ಉದ್ದೇಶವಿದ್ದರೆ ಮೊದಲು ವಾರ್ಡ್

3 ನೇ ಪುಟಕ್ಕೆ

ಅಧಿಕಾರಿಗಳಿಗೂ ಜನಪ್ರತಿನಿಧಿಗಳಷ್ಟೇ ಜವಾಬ್ದಾರಿ

ಜನರ ಸಮಸ್ಯೆ ಅರಿತು ಆದೇಶಗಳ ಅನುಷ್ಠಾನಕ್ಕೆ ಸಾರ್ವಜನಿಕರ ಬಳಿಗೆ ಹೋಗಬೇಕು: ಡಿಸಿ ಪೂವಿತಾ



ರಾಯಚೂರು,ಸೆ.16-

ದೇಶದ ಅಭಿವೃದ್ಧಿಗೆ ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆ ಅತ್ಯಗತ್ಯ. ಕಾನೂನು ರೂಪಿಸುವ ಚುನಾಯಿತ ಜನಪ್ರತಿನಿಧಿಗಳಷ್ಟೇ ಅಧಿಕಾರಿಗಳಿಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಜವಾಬ್ದಾರಿ ಇದ್ದು, ಸರ್ಕಾರದ ಆದೇಶಗಳನ್ನು ಅನುಷ್ಠಾನಗೊಳಿಸುವಾಗ ಸಾರ್ವಜನಿಕರಿಂದ ಮಾಹಿತಿ ಹಾಗೂ ಅಭಿಪ್ರಾಯಗಳನ್ನು ಪಡೆಯಲು ಅಧಿಕಾರಿಗಳು ಜನರ ಬಳಿಗೆ ತೆರಳಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಗಳ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ತಾಲೂಕು ಮತ್ತು ಜಿಲ್ಲಾ ಮಟ್ಟದ ಯುವ ಸಂಸತ್ತು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವುದು, ಮಾನವ ಹಕ್ಕುಗಳನ್ನು ರಕ್ಷಿಸುವುದು ಹಾಗೂ ಆಡಳಿತದಲ್ಲಿ ಸಾರ್ವಜನಿಕರ ಭಾಗವಹಿಸುವಿಕೆಯನ್ನು ಬಲಪಡಿಸುವುದು ಪ್ರಜಾಪ್ರಭುತ್ವದ ಮೂಲ ಆಶಯವಾಗಿದೆ. ಜನರ ಅಭಿಪ್ರಾಯವನ್ನು ಆಲಿಸಿ ಆಡಳಿತ ನಡೆಸಿದಾಗ ಮಾತ್ರ ಪ್ರಜಾಪ್ರಭುತ್ವದ ಆಶಯಗಳು ಪರಿಣಾಮಕಾರಿಯಾಗಿ ಜಾರಿಯಾಗಲು ಸಾಧ್ಯ ಎಂದರು.

1950ರ ಜನವರಿ 26ರಂದು ಸಂವಿಧಾನ ಜಾರಿಗೆ ಬಂದ ಬಳಿಕ ಭಾರತವು ಪ್ರಜಾಪ್ರಭುತ್ವ ರಾಷ್ಟ್ರವಾಗಿ ರೂಪುಗೊಂಡಿತು. ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ಅನೇಕ ಮಹನೀಯರ ದೂರದೃಷ್ಟಿಯ ಫಲವಾಗಿ ನಾಗರಿಕರ ಹಕ್ಕು, ಕರ್ತವ್ಯ, ಆಡಳಿತ ವ್ಯವಸ್ಥೆ ಹಾಗೂ

3 ನೇ ಪುಟಕ್ಕೆ

ಸೆ.17ರಂದು ವಿಶ್ವಕರ್ಮ ಜಯಂತಿ ಅದ್ಧೂರಿ ಆಚರಣೆ

ವಿಶ್ವಕರ್ಮ ವೃತ್ತದಿಂದ ಜಂಬಲದಿನ್ನಿ ರಂಗಮಂದಿರದವರೆಗೆ ಮೆರವಣಿಗೆ: ಉದಯಕುಮಾರ ಪತ್ತಾರ್



ರಾಯಚೂರು,ಸೆ.16-

ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜದ ವತಿಯಿಂದ ಭಗವಾನ್ ಶ್ರೀ ವಿಶ್ವಕರ್ಮ ಜಯಂತಿಯನ್ನು ಸೆ.17ರಂದು ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮ ಗಳೊಂದಿಗೆ ಅದ್ದೂರಿಯಾಗಿ ಆಚರಿಸಲಾಗು ವುದು ಎಂದು ಸಮಾಜದ ಜಿಲ್ಲಾಧ್ಯಕ್ಷ ಉದಯಕುಮಾರ ಪತ್ತಾರ್ ಮಸ್ಕಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಯಂತಿ ಅಂಗವಾಗಿ ಬೆಳಿಗ್ಗೆ 10 ಗಂಟೆಗೆ ನಗರದ ರೇಡಿಯೋ ಸ್ಟೇಷನ್ ಸಮೀಪದ ವಿಶ್ವಕರ್ಮ ವೃತ್ತದಿಂದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಭವ್ಯ ಮೆರವಣಿಗೆ ನಡೆಯಲಿದೆ. ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಬಂಧುಗಳು ಭಾಗವಹಿಸಲಿದ್ದಾರೆ ಎಂದರು.

3 ನೇ ಪುಟಕ್ಕೆ

ಸರ್ಕಾರಕ್ಕೆ ಕಾಯಕಲ್ಪ ನೀಡಲು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳ ಸರಣಿ ಸಭೆ

ಬೆಂಗಳೂರು, ಸೆ.16-

ರಾಜ್ಯ ಸರ್ಕಾರ ಮತ್ತು ಪಕ್ಷಕ್ಕೆ ಕಾಯಕಲ್ಪ ನೀಡುವ ನಿಟ್ಟಿನಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು ಇಂದು ಬೆಂಗಳೂರಿನಲ್ಲಿ ಸರಣಿ ಸಭೆಗಳನ್ನು ನಡೆಸಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರು ಬೆಂಗಳೂರಿಗೆ ಆಗಮಿಸಿದ್ದು, ಬೆಳಗ್ಗೆ ಕಾಂಗ್ರೆಸ್‌ನ ಜಿಲ್ಲಾಧ್ಯಕ್ಷರುಗಳ ಜೊತೆ ಚರ್ಚೆ ನಡೆಸಿದ್ದಾರೆ. ಮಧ್ಯಾಹ್ನ ಎಸ್‌ಐಆರ್ ಬಗ್ಗೆ ಪ್ರಮುಖ ನಾಯಕರ ಜೊತೆ ಸಮಾಲೋಚನೆ ನಡೆದಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು. ಇತ್ತೀಚೆಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ

ಅವರು ದೆಹಲಿಗೆ ಭೇಟಿ ನೀಡಿ, ವರಿಷ್ಠ ನಾಯಕರನ್ನು ಭೇಟಿ ಮಾಡಿ ಕೆಲ ಮಾಹಿತಿ ವಿನಿಮಯ ಮಾಡಿಕೊಂಡಿದ್ದರು. ಅದರ ಬೆನ್ನಲ್ಲೇ ಪ್ರಧಾನ ಕಾರ್ಯದರ್ಶಿಗಳು ರಾಜ್ಯಕ್ಕಾಗಮಿಸಿರುವುದು ಗಮನ ಸೆಳೆದಿದೆ.

ಖಾಲಿಯಿರುವ ಎರಡು ಸಚಿವ ಸ್ಥಾನಗಳಿಗೆ ನೇಮಕಾತಿ, ವಿಧಾನ ಪರಿಷತ್‌ನಲ್ಲಿ ತೆರವಾಗಿರುವ 5 ಸದಸ್ಯ ಸ್ಥಾನಗಳು ಹಾಗೂ ನಿಗಮ-ಮಂಡಳಿಗಳ ಅಧ್ಯಕ್ಷರ ಆಯ್ಕೆಗೆ ಈ ಸಂದರ್ಭದಲ್ಲಿ ಚರ್ಚೆ ನಡೆಸಲಾಗಿದೆ.



ನಿಗಮ-ಮಂಡಳಿ ಗಳಲ್ಲಿ ಎರಡೂವರೆ ವರ್ಷ ಪೂರ್ಣಗೊಂಡಿರುವವರು ರಾಜೀನಾಮೆ ನೀಡಬೇಕು ಎಂದು ಈಗಾಗಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದರು. ಆದರೂ ಬಹುತೇಕರು ರಾಜೀನಾಮೆ ನೀಡಿಲ್ಲ. ಹೀಗಾಗಿ ಅವರಿಂದ ರಾಜೀನಾಮೆ ಪಡೆದು ಬೇರೆಯವರನ್ನು ನೇಮಿಸಲು ಕಾಂಗ್ರೆಸ್ ತಯಾರಿ ನಡೆಸಿದೆ. ಇಂದಿನ ಸಭೆಯಲ್ಲಿ ಈ ಕುರಿತು ಮಹತ್ವದ ಚರ್ಚೆಗಳಾಗಿವೆ.

ನೂತನ ಜಿಲ್ಲಾಧ್ಯಕ್ಷರಿಗೆ ಮುಂದಿನ ದಿನಗಳಲ್ಲಿ ನಡೆಯುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಜ್ಜುಗೊಳ್ಳುವಂತೆ ಪಕ್ಷದ ವರಿಷ್ಠರು ಸೂಚನೆ ನೀಡಿದ್ದಾರೆ.

ಗ್ರಾಮ ಪಂಚಾ ಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಸೇರಿದಂತೆ ನಗರಸಭೆ, ಪುರಸಭೆ, ಪಾಲಿಕೆಗಳು, ಗ್ರೇಟರ್ ಬೆಂಗಳೂರು ಒಳಗೊಂಡಂತೆ ಹಲವು ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಕಾಂಗ್ರೆಸ್‌ಗೆ ಪ್ರತಿಷ್ಠೆಯ ಕಣಗಳಾಗಿವೆ.

ಅದೇ ರೀತಿ ಕಾಂಗ್ರೆಸ್ ಹಿರಿಯೂರು ವಿಧಾನಸಭೆಗೆ ನಡೆಯುವ ಉಪ ಚುನಾವಣೆ ಕೂಡ ಗೆಲ್ಲುವ ಪಣತೊಟ್ಟಿದೆ. ಈ ಕುರಿತು ಇಂದಿನ ಸಭೆಯಲ್ಲಿ ಜಿಲ್ಲಾಧ್ಯಕ್ಷರಿಗೆ ಮಾಹಿತಿ ನೀಡಲಾಗಿದೆ.

ಈಗಾಗಲೇ ಗ್ಯಾರಂಟಿ ಸಮಿತಿಗಳಿಗೂ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಿಸಲಾಗಿದೆ.

ಭಾರತ್ ಜೋ ಡೋ ಯುವ ಸಂಘಗಳು ಕಾಂಗ್ರೆಸ್‌ನ ಸಂಘಟನಾ ಚಟುವಟಿಕೆಗಳಿಗೆ ಭದ್ರ ಬುನಾದಿ ಹಾಕುವ ವೇದಿಕೆಗಳಾಗಿವೆ.

ಅವುಗಳಿಗೆ ಸದಸ್ಯರನ್ನು ನೇಮಿಸುವಾಗ ಎಚ್ಚರಿಕೆ ವಹಿಸುವಂತೆ ಪಕ್ಷದ ಪ್ರಮುಖರು ಜಿಲ್ಲಾಧ್ಯಕ್ಷರಿಗೆ ಮಾಹಿತಿ ನೀಡಿದ್ದಾರೆ.

ಚುನಾವಣಾ ಆಯೋಗದಿಂದ ನಡೆದಿರುವ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕುರಿತಂತೆ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆಯೂ ಸಭೆಯಲ್ಲಿ ಸ್ಪಷ್ಟ ನಿರ್ದೇಶನಗಳನ್ನು ನೀಡಲಾಗಿದೆ.

ಗಣೇಶ ಹಬ್ಬಕ್ಕೆ ಮಾತ್ರ ಡಿ.ಜೆ ಬ್ಯಾನ್ ಸರಿಯಲ್ಲ; ಮಸೀದಿಯಲ್ಲಿ ಧ್ವನಿವರ್ಧಕ ಇರುವವರೆಗೆ ಡಿ.ಜೆ ಹಚ್ಚುವುದು ಬಿಡಲ್ಲ-ಪ್ರಮೋದ್ ಮುತಾಲಿಕ್

ರಾಯಚೂರು,ಸೆ.16-

ಸುಪ್ರೀಂಕೋರ್ಟ್ ಆದೇಶದಂತೆ ಡಿ.ಜೆ ಬ್ಯಾನ್ ಮಾಡಿದ್ದು ನಾವು ಪಾಲಿಸುತ್ತೇವೆ ಆದರೆ ಗಣೇಶ ಹಬ್ಬಕ್ಕೆ ಮಾತ್ರ ತಕರಾರು ಮಾಡುವುದು ಸರಿಯಲ್ಲ, ಮುಸ್ಲಿಂ ಸೇರಿ ಎಲ್ಲರೂ ಡಿ.ಜೆ ಹಾಕುತ್ತಿದ್ದಾರೆ ಮಸೀದಿಯಲ್ಲಿ ಹಚ್ಚುವ ಸೌಂಡ್ ಸಿಸ್ಟಂ ನಿಂದ ಶಬ್ದ ಮಾಲಿನ್ಯ ವಾಗುತ್ತಿಲ್ಲವೇ ಮಸೀದಿಯಲ್ಲಿನ ಮೈಕ್ ಇರುವವರೆಗೆ ಡಿ.ಜೆ ಹಚ್ಚುವುದು ಬಿಡುವುದಿಲ್ಲ ಎಂದು ಶ್ರೀರಾಮ ಸೇನೆಯ ರಾಜ್ಯಾಧ್ಯಕ್ಷ ಪ್ರಮೋದ್ ಮುತಾಲಿಕ್ ಹೇಳಿದರು.

ಅವರು ಬುಧವಾರ ರಾಯಚೂರಿನಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿ, ಗಣೇಶ ಹಬ್ಬದ



ವೇಳೆ 7 ಕಡೆಗೆ ಪರವಾನಗಿ ಪಡೆಯಬೇಕು ಎಂದು ಸರ್ಕಾರ ನಿರ್ಭಂದ ವಿಧಿಸಿದೆ. ಮಸೀದಿ ಮುಂದೆ ಡಿ.ಜೆ ಹಚ್ಚಬಾರದು ಎಂದು ಪೊಲೀಸರು ಹೇಳಿದ್ದು ಖಂಡನೀಯ, ಹಿಂದುಗಳ ಹಬ್ಬಕ್ಕೆ ಸಾಕಷ್ಟು ನಿರ್ಬಂಧ ಸಲ್ಲದು, ಮಸೀದಿಗಳ ಮೇಲೆ ಹಾಕುವ ಧ್ವನಿ ವರ್ಧಕಗಳಿಗೆ ಅವರು ಪರವಾನಗಿ ಪಡೆದಿದ್ದಾರಾ, ಎಷ್ಟು ಡಿಸಿಬಲ್ ಶಬ್ದ ಬರುತ್ತಿದೆ ಎಂದು ಕೇಳಬಾರದ ಯಾವುದೇ ಸಮುದಾಯದ ಪ್ರಾರ್ಥನೆಗೆ ನಮ್ಮ ವಿರೋಧವಿಲ್ಲ ಆದರೆ ಶಬ್ದ ಮಾಲಿನ್ಯಕ್ಕೆ ವಿರೋಧವಿದೆ. ಧ್ವನಿ ವರ್ಧಕ ತೆಗೆಯುವವರಿಗೆ ನಮ್ಮ ಡಿ.ಜೆ ಇರುತ್ತೆ ಎಂದರು.

ಈಚನಾಳ ಗ್ರಾಮದಲ್ಲಿ ಅಸ್ಪೃಶ್ಯತೆ ಆಚರಣೆಗೆ ಕಠಿಣ ಶಿಕ್ಷೆಯಾಗಲಿ: ಲಿಂಗಸೂಗೂರು ತಾಲೂಕಿನ ಈಚನಾಳ ಗ್ರಾಮದ ಹೋಟೆಲ್‌ನಲ್ಲಿ ನಡೆದ ಅಸ್ಪೃಶ್ಯತೆ ಅಚರಣೆ ಕುರಿತು ಪ್ರತಿಕ್ರಿಯಿಸಿ ಅಸ್ಪೃಶ್ಯತೆ ಸಮಾಜದಲ್ಲಿ ಇನ್ನೂ ಜೀವಂತವಿದ್ದು ತಲೆತಗ್ಗಿಸುವಂತದ್ದು, ಸಾರ್ವಜನಿಕ ಸ್ಥಳ, ಹೋಟೆಲ್, ಬಾವಿ, ಕೆರೆ, ಕ್ಷೌರಿಕ ಅಂಗಡಿ ಸೇರಿದಂತೆ ನಾನಾ ಕಡೆ ಇನ್ನು ದಲಿತರಿಗೆ ಪ್ರವೇಶ ನಿರಾಕರಿ ಸಲಾಗುತ್ತಿರುವುದು ಖಂಡನಿಯ. ಭಾರತದ ಸಂವಿಧಾನದಲ್ಲಿ ಡಾ.ಅಂಬೇಡ್ಕರ್ ಅವರು ಎಲ್ಲರಿಗೂ ಧಾರ್ಮಿಕ, ಸಾಮಾಜಿಕ ಸ್ವಾತಂತ್ರ್ಯ ನೀಡಿದ್ದಾರೆ. ಈ ಘಟನೆ ಬಳಿಕ ಪಿಡಿಓ, ತಹಸೀಲ್ದಾರ್, ಜಿಲ್ಲಾಧಿಕಾರಿ ಅವರು ಪ್ರತಿ ಹಳ್ಳಿಗೆ ಹೋಗಿ ಅಸ್ಪೃಶ್ಯತೆ ನಿರ್ಮೂಲನೆ, ಕಾನೂನು ಅರಿವು ಮೂಡಿಸಬೇಕು. ತಪ್ಪಿಸ್ತರಿಗೆ ಶಿಕ್ಷೆ ವಿಧಿಸಬೇಕು ಎಂದರು.

ದೇಶದ ಅಧಿಕೃತ ಕಾರ್ಯಕ್ರಮಗಳಲ್ಲಿ ರಾಷ್ಟ್ರೀಯ ಗೀತೆ

3 ನೇ ಪುಟಕ್ಕೆ

ಅಲ್ಪಸಂಖ್ಯಾತ ಶಾಲೆಗಳ 100 ಶಿಕ್ಷಕರಿಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ



ರಾಯಚೂರು,ಸೆ.16-

ಜಿಲ್ಲೆಯ ಅಲ್ಪಸಂಖ್ಯಾತ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ 100 ಅತ್ಯುತ್ತಮ ಶಿಕ್ಷಕರಿಗೆ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಸಹಾರಾ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಮೊಹಮ್ಮದ್ ಅಬ್ದುಲ್ ಹೈ ಫೆರೋಜ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.19ರಂದು ಬೆಳಿಗ್ಗೆ 10.30ಕ್ಕೆ ನಗರದ ಪಂ. ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದರು.

ಜಿಲ್ಲೆಯ ವಿವಿಧ ಅಲ್ಪಸಂಖ್ಯಾತ ಶಾಲೆಗಳಿಂದ ಆಯ್ಕೆಯಾದ 100 ಶಿಕ್ಷಕರನ್ನು ಸಮಾರಂಭದಲ್ಲಿ ಸನ್ಮಾನಿಸಲಾಗುವುದು. ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರು ಸಲ್ಲಿಸುತ್ತಿರುವ ಸೇವೆ, ಸಮರ್ಪಣೆ ಹಾಗೂ ಕೊಡುಗೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಕಾರ್ಯಕ್ರಮವು ಅಲ್-ಕರೀಮ್ ಎಜುಕೇಷನಲ್, ರಿಲಿಜಿಯಸ್ ಆ್ಯಂಡ್ ಚಾರಿಟೇಬಲ್ ವೆಲ್ಫೇರ್ ಟ್ರಸ್ಟ್ ಅಧ್ಯಕ್ಷ ಹಜರತ್ ಶಾ ಲಾಜಾ ಐಹಾವುದ್ದೀನ್ ಫಾರೂಕ್ ನಕ್ಕ ಂದಿ ಖಾದ್ರಿ

3 ನೇ ಪುಟಕ್ಕೆ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ: ಚುನಾಯಿತ ಜನಪ್ರತಿನಿಧಿಗಳು ಜನರ ಸೇವಕರು


ವಿದ್ಯಾರ್ಥಿಗಳು ರಾಜಕೀಯ ಪ್ರಜ್ಞೆ ಮೂಡಿಸಿಕೊಳ್ಳಬೇಕು -ಡಾ. ಶರಣಪ್ರಕಾಶ ಪಾಟೀಲ

ಕಲಬುರಗಿ,ಸೆ.16

ಇಂದಿನ ವಿದ್ಯಾರ್ಥಿ ಸಮುದಾಯ ತಾವಾಯಿತು, ತಮ್ಮ ಓದು, ಉದ್ಯೋಗಕ್ಕೆ ಸೀಮಿತವಾಗದೆ ದೇಶ ನಿರ್ಮಾಣ ಮಾಡುವಲ್ಲಿ ಮತ್ತು ಸಮ-ಸಮಾಜ ನಿರ್ಮಾಣ ಮಾಡುವಲ್ಲಿ ರಾಜಕೀಯ ಪ್ರಜ್ಞೆ ಹೊಂದುವುದು ಅತೀ ಅವಶ್ಯಕವಾಗಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಕರೆ ನೀಡಿದರು.

ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಶಾಲಾ ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕಾನೂನು ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ನಗರದ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಹಾಗೂ ಸಾಂಸ್ಕೃತಿಕ ಸಂಘದ ಕಚೇರಿಯಲ್ಲಿ ಆಯೋಜಿಸಿದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ರಾಜಕೀಯ ಅರಿವಿಲ್ಲದ ಹೋದಲ್ಲಿ ಕೆಲವು ಪಟ್ಟಬದ್ಧ ಹಿತಾಸಕ್ತಿಗಳು ನಿಮ್ಮನ್ನು ತಪ್ಪು ದಾರಿಗೆ ಎಳೆಯುವ ಸಾಧ್ಯತೆ ಇದೆ. ಇದರಿಂದ ಯಾರು ನಿಮ್ಮ ಅಭಿವೃದ್ದಿಗೆ, ದೇಶದ ಒಳಿತಿಗೆ ಹಿತವರು ಎಂಬುದನ್ನು ಅರಿಯಲು ರಾಜಕೀಯ ಜ್ಞಾನ ಹೊಂದಬೇಕಾದ ಅವಶ್ಯಕತೆ ಇದೆ ಎಂದು ಒತ್ತಿ ಹೇಳಿದ ಅವರು, ಪ್ರಜಾಪ್ರಭುತ್ವದಲ್ಲಿ ತಿಳಿಸಿರುವ ಕರ್ತವ್ಯ ಮತ್ತು ಹಕ್ಕುಗಳ ಕುರಿತು ಅರಿತಲ್ಲಿ ಮಾತ್ರ ಉತ್ತಮ ಆಡಳಿತ ನೀಡಲು ಸಾದ್ಯವಾಗಲಿದೆ ಎಂದರು.

ದೇಶದ ಪ್ರತಿಯೊಬ್ಬ ಪ್ರಜೆಯೂ ಸ್ವಾಭಿಮಾನದಿಂದ ಬಾಳಲು ಮತ್ತು ಸಮಾನತೆಯ ಹಕ್ಕುಗಳನ್ನು ಪಡೆಯಲು ಸಂವಿಧಾನವೇ ಆಧಾರವಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾಯಿತ ಜನಪ್ರತಿನಿಧಿಗಳು ರಾಜರಲ್ಲ, ಜನರ ಸೇವಕರು, ಇದು ಪ್ರಜಾಪ್ರಭುತ್ವದ ವೈಶಿಷ್ಟ್ಯವಾಗಿದೆ ಎಂದರು.



ಪ್ರಜಾಪ್ರಭುತ್ವದ ಅಂಗಗಳಾದ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗಗಳ ನಡುವೆ ಅಧಿಕಾರ ಹಂಚಿಕೆಯಾಗಿದ್ದು, ಯಾವುದೇ ಒಬ್ಬ ವ್ಯಕ್ತಿಯಲ್ಲಿ ಅಧಿಕಾರ ಕೇಂದ್ರೀಕೃತವಾಗಬಾರದು ಹಾಗೂ ದೇಶದ ಕಡೆ ಸಾಲಿನ ಮನುಷ್ಯನಿಗೂ ಸ್ವಾಭಿಮಾನದ ಬದುಕು ಸಿಗುವಂತೆ ಹಾಗೂ ವಿಶೇಷವಾಗಿ ಮಹಿಳೆಯರಿಗೆ ಸಮಾನ ಹಕ್ಕು, ಮತದಾನದ ಹಕ್ಕನ್ನು ಒದಗಿಸಿಕೊಟ್ಟ ಕೀರ್ತಿ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

371(ಜೆ) ವಿಶೇಷ ಕಾಯ್ದೆಯು ಸಂವಿಧಾನದಡಿಯಲ್ಲಿ ಒದಗಿಸಿದ ಪರಿಣಾಮವಾಗಿ, ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಮತ್ತು ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚಿನ ಅವಕಾಶಗಳು ಲಭ್ಯವಾಗುತ್ತಿವೆ. ಇಲ್ಲಿಯವರೆಗೆ 80 ಸಾವಿರ ಸರ್ಕಾರಿ ಉದ್ಯೋಗ ಸ್ಥಳೀಯರಿಗೆ ಲಭಿಸಿದೆ. ಪ್ರತಿ ವರ್ಷ ಸಾವಿರ ವೈದ್ಯಕೀಯ, ಎಳೆಂಟು ಸಾವಿರ ಇಂಜಿನೀಯರ್ ಸೀಟುಗಳು ನಮ್ಮ ಭಾಗದ ಯುವಕರಿಗೆ ಲಭ್ಯವಾಗಿವೆ ಎಂದರು.

ದೇಶದ ದಿಕ್ಕು ಬದಲಿಸಿದ ಸಂವಿಧಾನ:ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಅನೇಕ ಸ್ವಾತಂತ್ರ್ಯ ಸೇನಾನಿ ಹೋರಾಟಗರ ಅಹಿಂಸಾತ್ಮಕ ಹೋರಾಟದಿಂದ ದೇಶ ಸ್ವಾತಂತ್ರ್ಯ ಪಡೆದಾಗ ನಮ್ಮಲ್ಲಿ ಸಂವಿಧಾನ ಇರಲಿಲ್ಲ. ಕಟ್ಟಕಡೆಯ ವ್ಯಕ್ತಿಯ ನೋವನ್ನು ಅರಿತು ಅಂಬೇಡ್ಕರ್ ಅವರಿಗೆ ಸಂವಿಧಾನ ರಚನೆಯ ಜವಾಬ್ದಾರಿ ನೀಡಿದರು. ವಿವಿಧ ದೇಶಗಳ ಅಧ್ಯಯನ ನಡೆಸಿ ವಿವಿಧ ಧರ್ಮ, ಜಾತಿ, ಮತ ಪಂಥವನ್ನು ಹೊಂದಿರುವ ಭಾರತಕ್ಕೆ ಅನ್ವಯವಾಗುವಂತೆ ವಿಶಾಲವಾದ ಪ್ರಜಾಸ್ನೇಹಿ ಸಂವಿಧಾನವನ್ನು ಅಂಬೇಡ್ಕರ್ ರಚಿಸಿದ್ದು, ಇದು ದೇಶದ ದಿಕ್ಕನೆ ಬದಲಿಸಿದೆ ಎಂದರು.

ಸಂವಿಧಾನದಲ್ಲಿನ ಪ್ರತಿ ಶಬ್ದ, ಅಧ್ಯಾಯವನ್ನು ಕರಡು ಸಮಿತಿ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ ಅನುಮೋದಿಸಿದ್ದು, ಇದು ಯಾವುದೇ ಕಾಲ್ಪನಿಕ ಸಂವಿಧಾನವಲ್ಲ ಎಂಬುದನ್ನು ಎಲ್ಲರು ಅರಿಯಬೇಕು. ಇಂತಹ ಪ್ರಜಾಪ್ರಭುತ್ವ ಮಹತ್ವ ಸಾರಲು ಕಳೆದ ಮೂರು ವರ್ಷದಿಂದ ನಮ್ಮ ಸರ್ಕಾರ ಪ್ರಜಾಪ್ರಭುತ್ವ ದಿನಾಚರಣೆ ಆಯೋಜಿಸಿ ವಿದ್ಯಾರ್ಥಿ ಸಮುದಾಯದಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ ಎಂದರು.

ನಾಯಕತ್ವ ಗುಣ ಬೆಳೆಸಲು ಕಾಲೇಜು ಚುನಾವಣೆ ಘೋಷಣೆ: ವಿದ್ಯಾರ್ಥಿ ದೆಸೆಯಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕೆಂಬ ಉದ್ದೇಶದಿಂದ ಪಿ.ಯು.ಸಿ, ಪದವಿ ಕಾಲೇಜು ಮಟ್ಟದಲ್ಲಿ ವಿದ್ಯಾರ್ಥಿ ಚುನಾವಣೆ ನಡೆಸಲು ನಮ್ಮ ಸರ್ಕಾರ ನಿರ್ಧರಿಸಿ ಈಗಾಗಲೆ ಸರ್ಕಾರಿ ಆದೇಶ ಸಹ ಹೊರಡಿಸಿದೆ. ಇದಕ್ಕೆ ಹಲವರ ವಿರೋಧವಿತ್ತು. ಅದ್ಯಾವುದನ್ನು ಲೆಕ್ಕಿಸದೆ ರಾಜಕೀಯ ಹಿನ್ನೆಲೆ ಇದ್ದವರೆ ಎಂ.ಎಲ್.ಎ, ಮಂತ್ರಿ ಆಗಬೇಕು ಎನ್ನುವ ಅಪವಾದ ದೂರ ಮಾಡಲು ಸಾಮಾನ್ಯ ವ್ಯಕಿ ಸಹ ರಾಜಕೀಯಕ್ಕೆ ಬರಬೇಕು. ದೇಶ ಸೇವೆ ಮಾಡುವ ನಾಯಕನಾಗಿ ಹೊರಹೊಮ್ಮಬೇಕು ಎಂಬ ಸದುದ್ದೇಶದಿಂದ ಇದನ್ನು ಜಾರಿಗೆ ತರಲಾಗಿದೆ ಎಂದು ಡಾ.ಶರಣಪ್ರಕಾಶ ಪಾಟೀಲ ತಿಳಿಸಿದರು.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಟಿ.ಎನ್.ಭಾಸ್ಕರ್ ಮಾತನಾಡಿ, ಸಂಘರ್ಷ ಮತ್ತು ಸಂಕೀರ್ಣ ಪರ್ವದಲ್ಲಿ ನಾವೆಲ್ಲ ಇದ್ದೇವೆ. ಭಾರತವು ಪ್ರಜಾಶಾಹಿದಿಂದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಬಂದರು ಇದೂವರೆಗೆ ದೇಶದಲ್ಲಿ ಸಂಪೂರ್ಣ ಸಮಾನತೆ ಸಾಧಿಸಲು ಸಾಧ್ಯವಾಗಿಲ್ಲ. ಜಾತಿ, ಮತ, ಧರ್ಮಗಳ ನಡುವೆ ಅಂತರ ಹೆಚ್ಚಿದೆ. ಕೆಲವರ ವಕ್ರದುಷ್ಟಿ, ಸ್ವಾರ್ಥ ಇದಕ್ಕೆ ಕಾರಣ ಎಂದು ಅವರು ಅಭಿಪ್ರಾಯಪಟ್ಟರು.

ಪ್ರತಿಯೊಬ್ಬರಿಗೂ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮಾನತೆ ದೊರೆಯಲು ಸಂವಿಧಾನವೇ ಮೂಲ ಬುನಾದಿಯಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬಡ, ಹಿಂದುಳಿದವರನ್ನು ಮೇಲೆತ್ತುವ ಕೆಲಸವಾದಲ್ಲಿ ಮಾತ್ರ ಪ್ರಜಾಪ್ರಭುತ್ವ ದಿನಾಚರಣೆ ಸಾಫಲ್ಯವಾಗುತ್ತದೆ.

ಯುವಕರ ಸಬಲೀಕರಣ, ಕೌಶಲ್ಯಾಭಿವೃದ್ಧಿ, ಮಹಿಳಾ ಸಬಲೀಕರಣ ಮತ್ತು ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡುವುದರ ಜೊತೆಗೆ ಜೀತಮುಕ್ತ ಹಾಗೂ ಸಮಾನತೆಯ ಭಾರತ ನಿರ್ಮಾಣದವಾದಲ್ಲಿ ಮಾತ್ರ ಜಾಗತಿಕವಾಗಿ ಪ್ರಜಾಪ್ರಭುತ್ವ ಶ್ರೇಯಾಂಕದಲ್ಲಿ 53ನೇ ಸ್ಥಾನದಲ್ಲಿರುವ ಭಾರತವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲು ಸಾದ್ಯವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಇದೇ ಸಮಾರಂಭದಲ್ಲಿ ಸಚಿವ ಡಾ.ಶರಣಪ್ರಕಾಶ ಪಾಟೀಪಲ ಅವರು ಯುವ ಸಂಸತ್ತಿಗೆ ಚಾಲನೆ ನೀಡಿದರು. ಕು. ಆರಾಧ್ಯ ಅವರು ಸಂವಿಧಾನ ಪೀಠಿಕೆಯನ್ನು ಸರ್ವರಿಗೂ ಬೋಧಿಸಿದರು.

ಕಾರ್ಯಕ್ರಮದಲ್ಲಿ ಕಲಬುರಗಿ ಗ್ರಾಮೀಣ ಶಾಸಕ ಬಸವರಾಜ ಮತ್ತಿಮೂಡ್, ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ, ಜಿಲ್ಲಾಧಿಕಾರಿ ಇಕ್ರಂ ಶರೀಫ್, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ಡೊಡ್ಡಮನಿ, ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ರಿತಿಕಾ ವರ್ಮಾ, ನ್ಯಾಯಾವಾದಿಗಳ ಸಂಘದ ಅಧ್ಯಕ್ಷ ಎಸ್.ವಿ.ಪಸಾರ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು, ನೂರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅಣವೀರ ಹರಸೂರ್ ಸ್ವಾಗತಿಸಿದರು. ಉಪನ್ಯಾಸಕ ಡಾ. ರಾಜಶೇಖರ್ ಮಾಂಗ್ ನಿರೂಪಿಸಿದರು. ಪ್ರಾಂಶುಪಾಲ ಶಿವರಾಂ ಚವ್ಹಾಣ ವಂದಿಸಿದರು.

ದೇವರು ಮರಣ ಮರೆಯದಿರು ಮನುಜ : ಶ್ರೀ ರಂಭಾಪುರಿ ಜಗದ್ಗುರುಗಳು



ನರಗುಂದ,ಸೆ.16-

ಮಾನವ ಜೀವನ ದೇವರು ಕೊಟ್ಟ ಅಮೂಲ್ಯ ವರ. ಅರಿವುಳ್ಳ ಜನ್ಮದಲ್ಲಿ ಬಂದು ಶಿವಜ್ಞಾನ ಮತ್ತು ಗುರು ಕಾರುಣ್ಯ ಪಡೆದು ಬಾಳಬೇಕು. ಮಾನವ ಜೀವನದಲ್ಲಿ ದೇವರು ಮತ್ತು ಮರಣವನ್ನು ಎಂದಿಗೂ ಯಾರೂ ಮರೆಯಲಾಗದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ತಾಲೂಕಿನ ಕೊಣ್ಣೂರು ಗ್ರಾಮದ ಚಿಕ್ಕಮಠದಲ್ಲಿ ಶ್ರೀ ಜಗದ್ಗುರು ವಿಶ್ವಾರಾಧ್ಯ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನಾವು ನಿಂತ ನೆಲ ಕುಡಿಯುವ ನೀರು ತಿನ್ನುವ ಅನ್ನ ಉಸಿರಾಡುವ ಗಾಳಿ ದೇವರು ಕೊಟ್ಟ ಅಮೂಲ್ಯ ಕೊಡುಗೆ. ಇವುಗಳಿಲ್ಲದೆ ಮನುಷ್ಯ ಬದುಕಿ ಬಾಳಲು ಸಾಧ್ಯವಾಗದು. ಭೌತಿಕ ಬದುಕಿನಲ್ಲಿ ಕೃತಜ್ಞತೆ ಹೇಳುವ ಮನುಷ್ಯ ಇಷ್ಟೆಲ್ಲ ಅಮೂಲ್ಯ ಸಂಪನ್ಮೂಲ ಕೊಟ್ಟಿರುವ ದೇವರನ್ನು ಸ್ಮರಿಸುವುದು ನಮ್ಮೆಲ್ಲರ ಧರ್ಮವಾಗಬೇಕು.

ದೇವರು ಎಲ್ಲರಲ್ಲಿಯೂ ಇದ್ದಾನೆ. ಆದರೆ ದೇವರಲ್ಲಿ ಎಲ್ಲರೂ ಇಲ್ಲ. ಇದು ಸತ್ಯವಾದ ಮಾತು. ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಿದ್ಧಾಂತದಲ್ಲಿ ಮಾನವ ಜೀವನದ ಅಮೂಲ್ಯ ಮೌಲ್ಯಗಳನ್ನು ಪ್ರತಿಪಾದಿಸಿದ್ದಾರೆ. ಅಂಗ ಲಿಂಗವಾಗಲು ನರ ಹರನಾಗಲು ಭವಿ ಭಕ್ತನಾಗಲು ಸಾಧನೆಯ ಮಾರ್ಗವನ್ನು ಬೋಧಿಸಿದ್ದಾರೆ. ಅಹಿಂಸಾದಿ ಧ್ಯಾನ ಪರ್ಯಂತರ ದಶಧರ್ಮ ಸೂತ್ರಗಳು ಮಾನವ ಜೀವನದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ದಾರಿ ದೀಪ. ಮನುಷ್ಯ ಎಷ್ಟು ವರ್ಷ ಬಾಳಿದರು ಒಂದಲ್ಲ ಒಂದು ದಿನ ಮೃತ್ಯು ಬಿಟ್ಟಿದ್ದಲ್ಲ. ಹುಟ್ಟು ಸಾವುಗಳ ಮಧ್ಯದ ಬದುಕು ಸಮೃದ್ಧಗೊಳ್ಳಲು ಗುರು ಬೋಧಾಮೃತ ಅವಶ್ಯಕ ಎಂದರು.

ಸಾನ್ನಿಧ್ಯ ವಹಿಸಿದ ಶ್ರೀ ಕಾಶಿ ಡಾ.ಮಲ್ಲಿಕಾರ್ಜುನ ವಿಶ್ವಾರಾಧ್ಯ ಜಗದ್ಗುರುಗಳು ತಮ್ಮ ಆಶೀರ್ವಚನದಲ್ಲಿ ಭೌತಿಕ ಬದುಕು ಸಮೃದ್ಧಗೊಂಡಂತೆ ಆಂತರಿಕ ಬದುಕು ಸಹ ಶ್ರೀಮಂತಗೊಳ್ಳಬೇಕು. ಧರ್ಮದ ಉದಾತ್ತವಾದ ಮೌಲ್ಯಗಳನ್ನು ಬದುಕಿನ ಆಚರಣೆಯಲ್ಲಿ ತಂದಾಗ ಮಾತ್ರ ಬದುಕು ಸಾರ್ಥಕವಾಗುತ್ತದೆ. ವೀರಶೈವ ಧರ್ಮದಲ್ಲಿ ಏನೆಲ್ಲ ಆಧ್ಯಾತ್ಮ ಸಂಪತ್ತು ಇದೆ. ಅದನ್ನು ಅರಿಯುವ ಮತ್ತು ಆಚರಿಸುವ ಮನೋ ಪ್ರವೃತ್ತಿ ಬೆಳೆದು ಬರಬೇಕೆಂದರು.

ನೇತೃತ್ವ ವಹಿಸಿದ ಚಿಕ್ಕಮಠದ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳವರು ಮಾತನಾಡಿ ಕೊಣ್ಣೂರ ಗ್ರಾಮದ ಭಕ್ತರ ಭಾಗ್ಯ ದೊಡ್ಡದು. ಬಹುದಿನಗಳ ಕನಸು ಇಂದು ನನಸಾಗಿರುವುದು ಸಂತೋಷ. ಗೌರಿ ಗಣೇಶನೊಂದಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಹಾಗೂ ಕಾಶಿ ಜಗದ್ಗುರುಗಳು ಕೊಣ್ಣೂರಿಗೆ ಆಗಮಿಸಿರುವುದು ನಮ್ಮೆಲ್ಲರ ಪುಣ್ಯದ ಫಲ ಎಂದರು.

ಪವಿತ್ರ ಸಮಾರಂಭದಲ್ಲಿ ನರಗುಂದ, ಆಲಮೇಲ, ಮಮದಾಪುರ ಇನ್ನೂ ಅನೇಕ ಮಠಾಧೀಶರು ಪಾಲ್ಗೊಂಡಿದ್ದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಉಭಯ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿತು. ಸಹಸ್ರಾರು ಭಕ್ತರು ಪಾಲ್ಗೊಂಡು ಉಭಯ ಜಗದ್ಗುರುಗಳ ಆಶೀರ್ವಾದಕ್ಕೆ ಪಾತ್ರರಾದರು. ಉತ್ಸವದಲ್ಲಿ ಕುಂಭ ಹೊತ್ತ ಮಹಿಳೆಯರು ಆರತಿ ಹಿಡಿದ ಸುಮಂಗಲೆಯರು ಭಜನೆ ವೀರಗಾಸೆ ಕಲಾವಿದರು ಪಾಲ್ಗೊಂಡಿದ್ದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

ಬಾಲ್ಯ ವಿವಾಹ ಸಮಾಜಕ್ಕೆ ಮಾರಕ, ಕಾನೂನು ಬಾಹಿರ: ಸಂಡೂರಿನಲ್ಲಿ ಜಾಗೃತಿ ಕಾರ್ಯಕ್ರಮ

ಬಳ್ಳಾರಿ,ಸೆ.15-

18 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಹಾಗೂ 21 ವರ್ಷದೊಳಗಿನ ಗಂಡುಮಕ್ಕಳಿಗೆ ಮದುವೆ ಮಾಡು ವುದು ಕಾನೂನುಬಾಹಿರ ವಾಗಿದ್ದು, ಇದು ಸಮಾಜಕ್ಕೆ ದೊಡ್ಡ ಪಿಡು ಗಾಗಿದೆ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ. ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬಳ್ಳಾರಿ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಂಡೂರು ಹಾಗೂ ಎಸ್.ಇ.ಎಸ್ ಬಾಲಕಿಯರ ಪ್ರೌಢಶಾಲೆ ಸಂಡೂರು ಇವರ ಸಂಯುಕ್ತಾಶ್ರಯದಲ್ಲಿ ಶಾಲಾ ಸಭಾಭವನದಲ್ಲಿ ವಿದ್ಯಾರ್ಥಿನಿಯರಿಗಾಗಿ ಹಮ್ಮಿಕೊಳ್ಳಲಾಗಿದ್ದ 'ಬಾಲ್ಯವಿವಾಹ ನಿಷೇಧ ಹಾಗೂ ಹದಿಹರೆಯದವರ ಆರೋಗ್ಯ ರಕ್ಷಣೆ' ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಡತನ, ಅಜ್ಞಾನ, ಮೂಢ ನಂಬಿಕೆ ಹಾಗೂ ಕುಟುಂಬದ ಆಸ್ತಿ ಉಳಿಸಿಕೊಳ್ಳುವ ಉದ್ದೇಶದಿಂದ ಇಂದಿಗೂ ಬಾಲ್ಯವಿವಾಹಗಳು ನಡೆಯುತ್ತಿರುವುದು ವಿಷಾದನೀಯ. ಇದರಿಂದ ಹೆಣ್ಣುಮಕ್ಕಳ ಶಿಕ್ಷಣ ಮತ್ತು ಭವಿಷ್ಯಕ್ಕೆ ಅಡ್ಡಿಯಾಗುವುದಲ್ಲದೆ, ಅವರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ತೀವ್ರ ದುಷ್ಪರಿಣಾಮ ಬೀರುತ್ತದೆ.

ಬಾಲ್ಯ ದಲ್ಲಿ ಗರ್ಭಧಾರಣೆಯಾಗು ವುದ ರಿಂದ ರಕ್ತಹೀನತೆ, ಅಪೌಷ್ಟಿಕತೆ, ತಾಯಿ ಮತ್ತು ಶಿಶು ಮರಣದ ಅಪಾಯಗಳು ಹೆಚ್ಚಾಗುತ್ತವೆ ಎಂದು ಅವರು ತಿಳಿಸಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆ- 2006ರ ಪ್ರಕಾರ ಬಾಲ್ಯ ವಿವಾಹ ಮಾಡಿಸುವುದು, ಅದರಲ್ಲಿ ಭಾಗಿಯಾಗುವುದು ಅಥವಾ ಪ್ರೋತ್ಸಾ ಹಿಸುವುದು ಶಿಕ್ಷಾರ್ಹ ಅಪರಾಧ. ತಪ್ಪಿತಸ್ಥರಿಗೆ 2 ವರ್ಷಗಳ ಕಠಿಣ ಜೈಲು ಶಿಕ್ಷೆ ಮತ್ತು 1 ಲಕ್ಷದ ವರೆಗೆ ದಂಡ ವಿಧಿಸಲು ಅವಕಾಶವಿದೆ.

ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದರೆ ಸಾರ್ವಜನಿಕರು ತಕ್ಷಣ ಮಕ್ಕಳ ಉಚಿತ ಸಹಾಯವಾಣಿ 1098 ಅಥವಾ 112ಕ್ಕೆ ಕರೆ ಮಾಡಿ ದೂರು ನೀಡಬಹುದು ಎಂದು ಮಾಹಿತಿ ನೀಡಿದರು. ಇದೇ ವೇಳೆ ಪೋಕ್ಸೋ ಕಾಯ್ದೆ- 2012 ಹಾಗೂ ಮಾನಸಿಕ ಆರೋಗ್ಯ ನೆರವಿಗಾಗಿ 'ಟೆಲಿ-ಮನಸ್' (14416) ಉಚಿತ ಸಹಾಯ ವಾಣಿಯ ಬಗ್ಗೆಯೂ ಜಾಗೃತಿ ಮೂಡಿಸಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಂಡೇಗೌಡ ಅವರು ಕ್ಷಯ, ಕುಷ್ಠರೋಗ ಹಾಗೂ ಸೊಳ್ಳೆಗಳಿಂದ ಹರಡುವ ಮಲೇರಿಯಾ, ಡೆಂಗ್ಯೂ ಮುಂತಾದ ಸಾಂಕ್ರಾಮಿಕ ರೋಗಗಳ ನಿಯಂತ್ರಣದ ಕುರಿತು ವಿವರವಾಗಿ ಮಾತನಾಡಿದರು. ಆರ್. ಕೆ.ಎಸ್.ಕೆ ಆಪ್ತಸಮಾಲೋಚಕ ಪತ್ರೆಗೌಡ ಅವರು ಮೈತ್ರಿ ಮುಟ್ಟಿನ ಕಪ್ ಬಳಕೆ ಹಾಗೂ ಪೋಷಣ್ ಮಾಸಾಚರಣೆಯ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಕಲ್ಲಯ್ಯ ಮಠ ಅವರು ವಹಿಸಿದ್ದರು. ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಅನಸೂಯ, ಎಚ್.ಐ.ಒ ಅನುಷಾ ಕಾರ್ಯಕ್ರಮ ನಿರೂಪಿಸಿ, ಸ್ವಾಗತಿಸಿದರು. ಸಮಾರಂಭದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಶಾಲೆಯ ನೂರಾರು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ: ಪ್ರಗತಿ ಪರಿಶೀಲನಾ ಸಭೆ

ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳು ಕಾಲಮಿತಿಯೊಳಗೆ ಜನರಿಗೆ ತಲುಪಿಸಿ: ಡಿಸಿ

ಕೊಪ್ಪಳ ಸೆ.15-

ಅಲ್ಪಸಂಖ್ಯಾತ ಸಮುದಾಯದ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಹಾಗೂ ಸೌಲಭ್ಯಗಳು ಯಾವುದೇ ವಿಳಂಬವಿಲ್ಲದೆ, ನಿಗದಿತ ಕಾಲಮಿತಿಯೊಳಗೆ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಆಯಾ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮವಹಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸೂಚನೆ ನೀಡಿದರು.



ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದಡಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಮಂಗಳವಾರ (ಸೆ. 15ರಂದು) ಹಮ್ಮಿಕೊಂಡಿದ್ದ 2026-27ನೇ ಸಾಲಿನ 1ನೇ ತ್ರೈಮಾಸಿಕ (ಏಪ್ರಿಲ್-2026 ರಿಂದ ಜೂನ್ -2026) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್ ಪಾರ್ಸಿ ಬೌದ್ಧ ಸೇರಿದಂತೆ ಅಲ್ಪಸಂಖ್ಯಾತರ ಸಮು ದಾಯದವರನ್ನು ಮುಖ್ಯವಾಹಿನಿಗೆ ತರಲು ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಈ ಎಲ್ಲಾ ಸಮುದಾಯದವರಿಗೆ ಇಲಾಖಾವಾರು ವಿವಿಧ ಯೋಜನೆಗಳಡಿಯಲ್ಲಿ ನಿಗದಿಪಡಿಸಿದ ಗುರಿಗಳಂತೆ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ತಲುಪಿಸಬೇಕು. ಜಿಲ್ಲೆಯ ಅಲ್ಪಸಂಖ್ಯಾತರ ಏಳಿಗೆಗಾಗಿ ಇರುವ ಸರ್ಕಾರದ ಯೋಜನೆಗಳ ಸಮರ್ಪಕವಾಗಿ ಅನುಷ್ಠಾನಕ್ಕೆ ಆಯಾ ಅಧಿಕಾರಿಗಳು ಒತ್ತು ನೀಡಬೇಕೆಂದರು.

ತಾಂತ್ರಿಕ ಸಮಸ್ಯೆಗಳಿಂದಾಗಿ ಇದುವರೆ ವಿದ್ಯಾರ್ಥಿವೇತನ ಪಾವತಿಯಾಗದ ವಿದ್ಯಾರ್ಥಿಗಳಿಗೆ ಮುಂದಿನ ಸಭೆಯೊಳಗೆ ಈ ಎಲ್ಲಾ ತಾಂತ್ರಿಕ ನ್ಯೂನತೆಗಳನ್ನು ಸರಿಪಡಿಸಿ ಅರ್ಹರಿಗೆ ಸೌಲಭ್ಯ ತಲುಪಿಸಬೇಕು. ಉರ್ದು ಶಾಲಾ ಶಿಕ್ಷಕರ ನೇಮಕಾತಿ ಕುರಿತಂತೆ ಜಿಲ್ಲೆಯ ವಾಸ್ತವ ಶಿಕ್ಷಕರ ಬೇಡಿಕೆ ಹಾಗೂ ವಿದ್ಯಾರ್ಥಿಗಳ ಅನುಪಾತದ ಬಗ್ಗೆ ಸರ್ಕಾರಕ್ಕೆ ಸ್ಪಷ್ಟ ವರದಿ ಸಲ್ಲಿಸುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಶಿಥಿಲಾವಸ್ಥೆಯಲ್ಲಿರುವ ಶಾಲಾ ಕಟ್ಟಡಗಳ ಕುರಿತಂತೆ ತಕ್ಷಣವೇ ಪಿಡಬ್ಲ್ಯೂಡಿ ಅಧಿಕಾರಿಗಳೊಂದಿಗೆ ಜಂಟಿ ಸ್ಥಳ ಪರಿಶೀಲನೆ ನಡೆಸಿ ವರದಿ ನೀಡುವಂತೆ ಸಂಬಂಧಪಟ್ಟ ಅಧಿಕಾರಿ ಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪಿಎಂ ಹೊಸ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ನಜೀರ ಸಾಬ್ ಮೂಲಿಮನಿ ಅವರು ಮಾತನಾಡಿ, ನಮ್ಮ ಜಿಲ್ಲೆಯ ಉರ್ದು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದ್ದು, ಖಾಲಿ ಇರುವ ಹುದ್ದೆಗಳ ಭರ್ತಿಗೆ ಶಿಕ್ಷಣ ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಪಿಎಂ ಹೊಸ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ಮಾನ್ವಿ ಪಾಷಾ ಅವರು ಮಾತನಾಡಿ, ಕೊಪ್ಪಳ ನಗರ ಹಾಗೂ ಗ್ರಾಮೀಣ ಭಾಗದಲ್ಲಿ ರುವ ದಶಕಗಳ ಹಳೆಯ, ಅಪಾ ಯಕಾರಿ ಸ್ಥಿತಿಯಲ್ಲಿರುವ ಉರ್ದು ಹಾಗೂ ಕನ್ನಡ ಶಾಲಾ ಕಟ್ಟಡಗಳನ್ನು ತೆರವುಗೊಳಿಸಿ, ನೂತನ ಕಟ್ಟಡ ನಿರ್ಮಾಣಕ್ಕೆ ತ್ವರಿತ ಕ್ರಮ ವಹಿಸ ಬೇಕು. ನಗರದ ಸರ್ದಾರಗಲ್ಲಿಯ ಅಂಗನವಾಡಿ ಕೇಂದ್ರವು ಸಹ ಹಳೆಯದ್ದಾಗಿದ್ದು, ನವೀಕರಣ ಮಾಡುವಂತೆ ಸಲಹೆ ನೀಡಿದರು.

ಪಿಎಂ ಹೊಸ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ಎಂ.ಡಿ ಸಿರಾಜ್ ಸಿದ್ದಾಪುರ ಅವರು ಮಾತನಾಡಿ, ಸಿದ್ದಾಪುರದಲ್ಲಿ ಕಸ್ತೂರಬಾ ಬಾಲಕಿಯರ ವಸತಿ ಶಾಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅನುದಾನದಡಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದ್ದು, ಈ ಕಾಮಗಾರಿಯ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ತಿಳಿಸಿದರು.

ಸಭೆಯಲ್ಲಿ ಪಿಎಂ ಹೊಸ 15 ಅಂಶಗಳ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ಪ್ರಶಾಂತ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಾಹಿಲ್ ಬಾಗ್ಲಾ, ಸಹಾಯಕ ಆಯುಕ್ತರಾದ ಮಹೇಬೂಬ್ ಜೀಲಾನ, ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ ಕೃಷ್ಣಮೂರ್ತಿ, ತೋಟಗಾರಿಕೆ ಜಂಟಿ ನಿರ್ದೇಶಕರಾದ ಕರಷ್ಣ ಉಕ್ಕುಂದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಈಶ್ವರ ಸವಡಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲ್ಲೂಕು ವಿಸ್ತರಣಾ ಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಗೃಹಜ್ಯೋತಿ ಅಕ್ರಮ ತಡೆಗೆ ಮರುಪರಿಶೀಲನೆ:

ಮನೆ-ಮನೆಗೆ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಮಂಜುನಾಥ ಭೇಟಿ

ಕೊಪ್ಪಳ ಸೆ.16-

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಐದು ಗ್ಯಾರಂಟಿ ಯೋಜನೆಗಳಲ್ಲೊಂದಾದ 'ಗೃಹಜ್ಯೋತಿ' ಯೋಜನೆಯಲ್ಲಿನ ಅಕ್ರಮಗಳನ್ನು ತಡೆಗಟ್ಟಿ, ಕೇವಲ ಅರ್ಹ ಫಲಾನುಭವಿಗಳಿಗೆ ಮಾತ್ರ ಯೋಜನೆಯ ನೈಜ ಲಾಭ ತಲುಪಿಸುವ ನಿಟ್ಟಿನಲ್ಲಿ ಕೊಪ್ಪಳ ನಗರದಾದ್ಯಂತ ಮನೆ-ಮನೆ ಭೇಟಿ ಮರುಪರಿಶೀಲನಾ ಪ್ರಕ್ರಿಯೆ ಚುರುಕುಗೊಂಡಿದೆ.



ನಗರದ ಕುವೆಂಪು ನಗರ ಸೇರಿದಂತೆ ವಿವಿಧ ವಾರ್ಡ್‌ಗಳಲ್ಲಿ ಪರಿಶೀಲನೆ ಕಾರ್ಯ ಸ್ವಲ್ಪ ವಿಳಂಬವಾಗುತ್ತಿರುವ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಜಿ. ಗೊಂಡಬಾಳ ಅವರು ಸ್ವತಃ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದರು. ಈ ವೇಳೆ ಮಾತನಾಡಿದ ಮಂಜುನಾಥ ಅವರು, ಕಾಂಗ್ರೆಸ್ ಸರ್ಕಾರವು ಬಡವರ ಹಾಗೂ ಸಮಾಜದ ಎಲ್ಲಾ ವರ್ಗದ ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಿದೆ. ಪ್ರತಿವರ್ಷ ಸುಮಾರು 56,000 ಕೋಟಿ ರೂ. ಅನುದಾನವನ್ನು ಈ ಗ್ಯಾರಂಟಿ ಯೋಜನೆಗಳಿಗೆ ಮೀಸಲಿಟ್ಟು ಜಾರಿಗೆ ತರುತ್ತಿರುವುದು ಅತ್ಯಂತ ಜನಪರ ಹಾಗೂ ಪ್ರಗತಿಪರ ಹೆಜ್ಜೆಯಾಗಿದೆ. ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪಡೆಯುತ್ತಿರುವ ಅರ್ಹರಿಗೆ ತೊಂದರೆಯಾಗಬಾರದು. ಅದಕ್ಕಾಗಿ ಜೆಸ್ಕಾಂ ಸಿಬ್ಬಂದಿ ನಡೆಸುತಿರುವ ಮರುಪರಿಶೀಲನೆಗೆ ಸಾರ್ವಜನಿಕರು ಹಾಗೂ ಫಲಾನುಭವಿಗಳು ಪೂರ್ಣ ಸಹಕಾರ ನೀಡಬೇಕು ಎಂದು ವಿನಂತಿಸಿದರು.

ಇದೇ ವೇಳೆ, ಬಾಗಿಲು ಮುಚ್ಚಿರುವ (ಡೋರ್ ಲಾಕ್) ಮನೆಗಳ ಕುರಿತು ಗಮನ ಸೆಳೆದ ಅವರು, ಅಂತಹ ಮನೆಗಳಿಗೆ ಕಡ್ಡಾಯವಾಗಿ ನೋಟಿಸ್ ಅಂಟಿಸಬೇಕು. ಆ ನೋಟಿಸ್‌ನಲ್ಲಿ ಸಂಬಂಧಿಸಿದ ಏರಿಯಾದ ಮೀಟರ್ ರೀಡರ್ ಹೆಸರು ಮತ್ತು ಮೊಬೈಲ್ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಜೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಈ ಭೇಟಿಯ ಸಂದರ್ಭದಲ್ಲಿ ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ಮೊಟ್ಲಾ ನಾಯ್ಕು, ಎಇಇ ಸೈಯದ್ ಯುನೂಸ್, ಇಲಾಖೆಯ ಸಿಬ್ಬಂದಿಯಾದ ಎಸ್.ಒ. ಹನುಮಂತ ಕಟಗಿ, ಸೀನಿಯರ್ ಲೈನ್‌ಮನ್ ಹನುಮಂತ ಹಳ್ಳಿ, ಮೀಟರ್ ರೀಡರ್ ಹುಲಗೇಶ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

ಸೆ.17 ರಂದು ಕೊಪ್ಪಳದಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ

ಕೊಪ್ಪಳ ಸೆ.16-

ಕೊಪ್ಪಳ ಜಿಲ್ಲಾಡಳಿತದ ವತಿಯಿಂದ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ 2025ರ ಕಾರ್ಯಕ್ರಮವನ್ನು ಸೆಪ್ಟೆಂಬರ್ 17 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಗದಗ ರಸ್ತೆಯ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಧ್ವಜಾರೋಹಣ ನೆರವೇರಿಸುವರು. ಉನ್ನತ ಶಿಕ್ಷಣ ಸಚಿವರಾದ ಬಸವರಾಜ ರಾಯರಡ್ಡಿ ಮತ್ತು ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಅವರು ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶರೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ್ ನಬೀಬ್ ಸಾಬ್ ದೋಟಿಹಾಳ, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರಸನ್ನ ಗಡಾದ್ ಮತ್ತು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಭಾಗವಹಿಸುವರು.

ಒಂದನೇಯ ಪುಟದಿಂದ

ಅಲ್ಪಸಂಖ್ಯಾತ ಶಾಲೆಗಳ 100 ಶಿಕ್ಷಕರಿಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ

ಸಾಹೇಬ್ ಅವರ ಆಧ್ಯಾತ್ಮಿಕ ಮಾರ್ಗದರ್ಶನದಲ್ಲಿ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರಮ್ ಸಿಂಗ್, ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಬೋಸರಾಜು, ಎ. ವಸಂತಕುಮಾರ್, ಸಂಸದ ಜಿ. ಕುಮಾರ್ ನಾಯಕ್, ಶಾಸಕ ಬಸನಗೌಡ ದದ್ದಲ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್‌ನ ಉಪಾಧ್ಯಕ್ಷ ಶೈಖ್ ಮಹೆಬೂಬ್, ಕಾರ್ಯದರ್ಶಿ ಮೊಕ್ಸಿನ್ ಜಮಾಲ್, ಖಜಾಂಚಿ ವಂ.ಡಿ. ಫರುಖುಲ್ಲಾ ಲೈಟ್, ಸದಸ್ಯರಾದ ಹುಸೇನ್, ಶೈಲಾಜ್ ಹಾಗೂ ಅಫ್ಪಾನ್ ಮನ್ಸೂರ್ ಉಪಸ್ಥಿತರಿದ್ದರು.

ಸೆ.18ರಂದು ಭಿಕ್ಷಂ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ

ಸ್ಥಳೀಯ ಪ್ರತಿಭೆಗಳಿಗೆ ಆದ್ಯತೆ ನೀಡಿರುವ ಭಿಕ್ಷಂ ಚಿತ್ರಕ್ಕೆ ಪ್ರೇಕ್ಷಕರು ಪ್ರೋತ್ಸಾಹ ನೀಡಬೇಕು. ಸೆ.18ರಂದು ನಡೆಯಲಿರುವ ಫಸ್ಟ್ ಲುಕ್ ಪೋಸ್ಟರ್ ಅನಾವರಣ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಚಿತ್ರತಂಡವನ್ನು ಹಾರೈಸಬೇಕು ಎಂದು ಮನವಿ ಮಾಡಿದರು. ಈ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ನಟರಾದ ತಿರುಪತಿ ಜೋಶಿ, ಜಾರ್ಜ್ ಅಬ್ರಹಂ, ನಾರಾಯಣ ರಾವ್, ಲಕ್ಷ್ಮಣ್ ಗಾರಲದಿನ್ನಿ ಉಪಸ್ಥಿತರಿದ್ದರು.

ಜನರನ್ನು ಪಶುಗಳಿಗಿಂತ ಕೀಳಾಗಿ ಕಾಣುವ ರಾಜಕಾರಣಿಅಧಿಕಾರಿಗಳು-ರಾಮನಗೌಡ

ನಂ.22ರ ಜನರ ನೀರು, ಚರಂಡಿ ಹಾಗೂ ಶೌಚಾಲಯದ ಸಮಸ್ಯೆಗಳನ್ನು ಗಮನಿಸಲಿ ಎಂದು ತಿರುಗೇಟು ನೀಡಿದರು.

ವಾರ್ಡ್‌ನಲ್ಲಿ ಮಹಿಳೆಯರು ಶೌಚಾಲಯ ಬಳಸಲು ಭಯಪಡುವ ಪರಿಸ್ಥಿತಿ ಇದೆ. ಶೌಚಾಲಯಗಳ ಸುತ್ತ ಸುರಕ್ಷಿತ ತಡೆಗೋಡೆ ಇಲ್ಲದಿರುವುದು ಹಾಗೂ ಮೂಲಸೌಕರ್ಯಗಳ ಕೊರತೆಯಿಂದ ನಿವಾಸಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಗುಡ್ಡದ ಮೇಲಿರುವ ಶೌಚಾಲಯಗಳಿಂದ ಮಳೆನೀರಿನೊಂದಿಗೆ ತ್ಯಾಜ್ಯ ಮನೆಗಳ ಮುಂದೆ ನಿಲ್ಲುತ್ತಿದೆ. ಚರಂಡಿ ವ್ಯವಸ್ಥೆ ಇಲ್ಲದೆ ಜನರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಆರೋಪಿಸಿದರು.

ಮಹಾನಗರ ಪಾಲಿಕೆ ನಗರವನ್ನು ಬಯಲು ಶೌಚಮುಕ್ತ ಪ್ರದೇಶವೆಂದು ಘೋಷಿಸಿದ್ದರೂ, ನೆಲಮಟ್ಟದಲ್ಲಿ ಸುರಕ್ಷಿತ ಶೌಚಾಲಯ ವ್ಯವಸ್ಥೆ ಇಲ್ಲದಿರುವುದು ಘೋಷಣೆಯ ವಾಸ್ತವಿಕತೆಯನ್ನು ಪ್ರಶ್ನಿಸುವಂತಿದೆ. ಕಾಗದದ ಮೇಲಿನ ಘೋಷಣೆಯಿಂದ ಜನರ ಸಮಸ್ಯೆ ಪರಿಹಾರವಾಗುವುದಿಲ್ಲ ಎಂದರು.

ವಾರ್ಡ್ ನಂ.22ರಲ್ಲಿ ನಾಲ್ಕು ನೀರಿನ ಟ್ಯಾಂಕ್‌ಗಳನ್ನು ನಿರ್ಮಿಸುವುದು, ಪ್ರತಿಯೊಂದು ಮನೆಗೂ ಶೌಚಾಲಯ ಕಲ್ಪಿಸುವುದು, ಶೌಚಾಲಯಗಳಿಗೆ ಸುರಕ್ಷಿತ ತಡೆಗೋಡೆ ನಿರ್ಮಿಸುವುದು ಹಾಗೂ ಸಮರ್ಪಕ ಚರಂಡಿ ವ್ಯವಸ್ಥೆ ಕಲ್ಪಿಸುವುದು ಸೇರಿದಂತೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮಹಾನಗರ ಪಾಲಿಕೆಯ ನಿರ್ಲಕ್ಷ್ಯದ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ದೂರು ಸಲ್ಲಿಸಲಾಗುವುದು. ಜನರ ಸಮಸ್ಯೆಗಳಿಗೆ ಪರಿಹಾರ ದೊರೆಯುವವರೆಗೆ ಜೆಡಿಎಸ್ ಹೋರಾಟ ಮುಂದುವರಿಸಲಿದೆ ಎಂದು ರಾಮನಗೌಡ ಏಗನೂರು ಎಚ್ಚರಿಸಿದರು. ಕಾರ್ಯಕ್ರಮದಲ್ಲಿ ವಾರ್ಡ್ ನಿವಾಸಿಗಳು, ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಜನರ ಸಮಸ್ಯೆ ಅರಿತು ಆದೇಶಗಳ ಅನುಷ್ಠಾನಕ್ಕೆ ಸಾರ್ವಜನಿಕರ ಬಳಿಗೆ ಹೋಗಬೇಕು: ಡಿಸಿ ಪೂವಿತಾ

ಸಾಮಾಜಿಕ ನ್ಯಾಯದ ಆಶಯಗಳನ್ನು ಒಳಗೊಂಡ ಸಂವಿಧಾನ ನಮಗೆ ದೊರೆತಿದೆ ಎಂದು ಹೇಳಿದರು.

ಸಂವಿಧಾನದ ಪೀಠಿಕೆ ಭಾರತೀಯರಾದ ನಾವು ಎಂಬ ಪದಗಳಿಂದ ಆರಂಭವಾಗುತ್ತದೆ. ಹೀಗಾಗಿ ದೇಶದ ಆಡಳಿತದಲ್ಲಿ ಸರ್ಕಾರದ ಜತೆಗೆ ಪ್ರತಿಯೊಬ್ಬ ನಾಗರಿಕನಿಗೂ ಜವಾಬ್ದಾರಿ ಇದೆ. ಪ್ರಜಾಪ್ರಭುತ್ವವನ್ನು ಬಲಪಡಿಸುವಲ್ಲಿ ಯುವಜನರ ಪಾತ್ರವೂ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಿಇಒ ಈಶ್ವರ ಕುಮಾರ್ ಕಾಂದೂ ಮಾತನಾಡಿ, ಪ್ರಜಾಪ್ರಭುತ್ವಕ್ಕೆ ಸಂವಿಧಾನವೇ ಅತಿ ದೊಡ್ಡ ಶಕ್ತಿಯಾಗಿದೆ. ಪ್ರತಿಯೊಬ್ಬ ನಾಗರಿಕನಿಗೂ ಗೌರವ, ಸಮಾನತೆ, ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳನ್ನು ಸಂವಿಧಾನ ನೀಡಿದೆ. ಪ್ರಜಾಪ್ರಭುತ್ವ ಎಂದರೆ ಕೇವಲ ಚುನಾವಣೆ ನಡೆಸುವುದಲ್ಲ; ಜನರ ಪಾಲ್ಗೊಳ್ಳುವಿಕೆ, ಪ್ರಶ್ನಿಸುವ ಹಕ್ಕು, ಅಭಿಪ್ರಾಯ ಸ್ವಾತಂತ್ರ್ಯ ಮತ್ತು ಸಂವಿಧಾನದ ಆಶಯಗಳ ಗೌರವವೂ ಅದರ ಪ್ರಮುಖ ಅಂಗಗಳಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು. ಬಳಿಕ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಜೆ.ಎಸ್. ಪಾಟೀಲ್ ಉಪನ್ಯಾಸ ನೀಡಿದರು.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ತಹಶೀಲ್ದಾರ್ ಸುರೇಶ್ ವರ್ಮಾ, ಡಿಡಿಪಿಐ ಮಲ್ಲಿಕಾರ್ಜುನ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೃಷ್ಣ ಶಾವಂತಗೇರಾ, ವಕೀಲರ ಸಂಘದ ಅಧ್ಯಕ್ಷ ಎನ್. ಶಿವಶಂಕರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸರಿಯಲ್ಲ; ಮಸೀದಿಯಲ್ಲಿ ಧ್ವನಿವರ್ಧಕ ಇರುವವರೆಗೆ ಡಿ.ಜೆ ಹಚ್ಚುವುದು ಬಿಡಲ್ಲ: ಪ್ರಮೋದ್ ಮುತಾಲಿಕ್

'ವಂದೇ ಮಾತರಂ'ನ ಸಂಪೂರ್ಣ ಆವೃತ್ತಿಯನ್ನು ಹಾಡಬೇಕೆಂಬ ಕೇಂದ್ರ ಸರ್ಕಾರದ ಒತ್ತಾಯದ ಹೊರತಾಗಿಯೂ, ಕೇವಲ ಮೊದಲ ಎರಡು ಚರಣಗಳಿಗೆ ಮಾತ್ರ ಸೀಮಿತವಾಗಿರಲು ನಿರ್ಧರಿಸಿರುವ ಪ್ರತಿಪಕ್ಷ ಕಾಂಗ್ರೆಸ್ ನ ನಡೆ ಖಂಡನಿಯ. ಅಲ್ಪಸಂಖ್ಯಾತರನ್ನು ಓಲೈಸಲು, ಓಟ್ ಬ್ಯಾಂಕ್ ಸಲುವಾಗಿ ಕಾಂಗ್ರೆಸ್ ಈ ರೀತಿ ಮಾಡುತ್ತಿದೆ.ಸ್ವಾತಂತ್ರ್ಯ ಸಂಗ್ರಾಮದ ವೇಳೆ ದೇಶದ ಜನರಿಗೆ ದೇಶಾಭಿಮಾನದ ಕಿಚ್ಚು ಹಚ್ಚಿದ್ದ ವಂದೇ ಮಾತರಂ ಗೀತೆಗೆ ಅವಮಾನ ಮಾಡುವ ಕಾಂಗ್ರೆಸ್ ನಡೆಗೆ ನಮ್ಮ ವಿರೋಧ ಇದೆ.

ದೇಶದಲ್ಲಿ ಬೆಂಕಿ ಹಚ್ಚುತ್ತೇವೆಂದ ಮುತಾಲಿಕ್:ಲಷ್ಕರ್ ಎ-ತೊಯ್ಬಾ ಉಗ್ರ ಸಂಘಟನೆಯ ಅಂಗಸಂಸ್ಥೆಯಾದ ಯುನೈಟೆಡ್ ಲಿಬರೇಶನ್ ಕೌನ್ಸಿಲ್, ಕಾಶ್ಮೀರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾಶ್ಮೀರಿ ಪಂಡಿತ ಸರ್ಕಾರಿ ನೌಕರರನ್ನು ಗುರಿಯಾಗಿಸಿ ನೌಕರರು ಅಲ್ಲಿಂದ ರಾಜೀನಾಮೆ ನೀಡಬೇಕು ಹೊರಹೋಗಬೇಕು ಎಂದು ಬೆದರಿಕೆ ಹಾಕುತ್ತಿದೆ ಈ ಕುರಿತು ಪ್ರಧಾನಿ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಮೌನ ಮುರಿಯಬೇಕು, ಕೇವಲ 370 ವಿಶೇಷ ಸ್ಥಾನಮಾನ ಹಿಂಪಡೆದರೆ ಸಾಲದು ಹಿಂದುಗಳ ರಕ್ಷಣೆ ಮಾಡಬೇಕು. ಒಬ್ಬನೇ ಒಬ್ಬ ಹಿಂದುವನ್ನು ನೌಕರಿಯಿಂದ ಹೊರ ಹಾಕಿದರೆ ದೇಶದಲ್ಲಿ ಬೆಂಕಿ ಹಚ್ಚಿ ಪ್ರತಿಭಟನೆ ಮಾಡುತ್ತೇವೆ ಎಂದು ಪ್ರಚೋದನಕಾರಿ ಹೇಳಿಕೆ ನೀಡಿದರು.

ರಾಯರೆಡ್ಡಿ ಹೇಳಿಕೆ ಹೇಳಿಕೆ ಮುಸ್ಲಿಂ ತುಷ್ಟೀಕರಣ: ಮುಸ್ಲಿಂರಿಂದ ಆಯೋಜಿಸಿದ ಕಾರ್ಯಕ್ರಮ ಒಂದರಲ್ಲಿ ಸಚಿವ ಬಸವರಾಜ ರಾಯರೆಡ್ಡಿ ಇಸ್ಲಾಂ ಧರ್ಮ ಮಾತ್ರ ಶ್ರೇಷ್ಠ ಎಂಬಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ ಅವರ ಹೇಳಿಕೆ ಮುಸ್ಲಿಂರ ಮತಬ್ಯಾಂಕ್ ಭದ್ರಪಡಿಸಿಕೊಳ್ಳಲು ತುಷ್ಟೀಕರಣದ ಹೇಳಿಕೆಯಾಗಿದೆ ಎಂದರು.ಈ ಸಂದ್ರಬಾದಲ್ಲಿ ರಘು ಗೌಡ ನಾಯಕ ಜಿಲ್ಲಾಧ್ಯಕ್ಷ, ನಗರ ಅಧ್ಯಕ್ಷ ಮಂಜುನಾಥ್, ಸುದೀಪ್ ಇನಿತರರು ಇದ್ದರು.

ವಿಶ್ವಕರ್ಮ ವೃತ್ತದಿಂದ ಜಂಬಲದಿನ್ನಿ ರಂಗಮಂದಿರದವರೆಗೆ ಮೆರವಣಿಗೆ: ಉದಯಕುಮಾರ ಪತ್ತಾರ್

ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಪೂಜೆ, ಧಾರ್ಮಿಕ ಕಾರ್ಯಕ್ರಮ, ಸಮಾಜದ ಬಂಧುಗಳ ಸಮಾವೇಶ ಹಾಗೂ ಉಪನ್ಯಾಸ ನಡೆಯಲಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರು, ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ವಿವಿಧ ವೃತ್ತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಸನ್ಮಾನಿಸಲಾಗುವುದು ಎಂದು ಹೇಳಿದರು.

ವಿಶ್ವಕರ್ಮ ಸಮಾಜದ ಪ್ರಮುಖ ವೃತ್ತಿಗಳಾದ ಬಡಗಿ, ಕಮ್ಮಾರ, ಶಿಲ್ಪಿ ಸೇರಿದಂತೆ ವಿವಿಧ ಕಸುಬುಗಳಲ್ಲಿ ತೊಡಗಿಸಿಕೊಂಡಿರುವವರ ಸೇವೆಯನ್ನು ಗುರುತಿಸಿ ಗೌರವಿಸಲಾಗುವುದು. ಯುವಕರು ಶಿಕ್ಷಣ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೂ ಸನ್ಮಾನ ಏರ್ಪಡಿಸಲಾಗಿದೆ ಎಂದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಶಾಸಕರು, ಜನಪ್ರತಿನಿಧಿಗಳು, ವಿವಿಧ ಮಠಾಧೀಶರು, ಸ್ವಾಮೀಜಿಗಳು ಹಾಗೂ ವಿಶ್ವಕರ್ಮ ಸಮಾಜದ ಮುಖಂಡರು ಭಾಗವಹಿಸಲಿದ್ದಾರೆ.

ಡಾ. ವಿಶ್ವನಾಥ್ ಎಸ್. ಪತ್ತಾರ್ ಗುಡಿಹಾಳ್ ಉಪನ್ಯಾಸ ನೀಡಲಿದ್ದು, ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಯಂತಿಯನ್ನು ಯಶಸ್ವಿಗೊಳಿಸಬೇಕು ಎಂದು ಉದಯಕುಮಾರ ಪತ್ತಾರ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿ ಕೆ. ರಾಮು ಗಾಣಧಾಳ್, ಡಾ. ವೆಂಕಟೇಶ್ ಅನ್ವರಿ, ಎ. ಈಶ್ವರ್ ಡಾ. ಮನೋಹರ್ ಪತ್ತಾರ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ವಿವಿಧ ತಾಲೂಕುಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಸಂವಿಧಾನದ ಮೌಲ್ಯಗಳನ್ನು ಮೈಗೂಡಿಸಿಕೊಂಡು ಸಾಮರಸ್ಯದ ಸಮಾಜ ನಿರ್ಮಿಸಿ-ಸಚಿವ ಈಶ್ವರ ಬಿ. ಖಂಡ್ರೆ ಕರೆ



ಬೀದರ್, ಸೆ.16-

ವಿಶ್ವದಲ್ಲೇ ಅತ್ಯಂತ ಮಾದರಿಯಾದ ಹಾಗೂ ಬೃಹತ್ ಲಿಖಿತ ಸಂವಿಧಾನ ಹೊಂದಿರುವ ಭಾರತದಲ್ಲಿ, ಪ್ರಜಾಪ್ರಭುತ್ವದ ಆಶಯಗಳನ್ನು ಎತ್ತಿಹಿಡಿಯಲು ಮತ್ತು ಯುವಜನತೆಯಲ್ಲಿ ಸಂವಿಧಾನದ ಅರಿವು ಮೂಡಿಸಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಸಚಿವರು ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಕರೆ ನೀಡಿದರು.

ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಬೀದರ, ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 'ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಭವಿಷ್ಯದ ಪ್ರಜೆಗಳಾದ ವಿದ್ಯಾರ್ಥಿಗಳಿಗೆ ಸಂವಿಧಾನದ ಆಶಯಗಳು, ಸದಾಶಯಗಳು ಮತ್ತು ಹಕ್ಕು-ಬಾಧ್ಯತೆಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ಆಚರಣೆಯ ಮುಖ್ಯ ಉದ್ದೇಶವಾಗಿದೆ. ಕಳೆದ ವರ್ಷ ಪ್ರಜಾಪ್ರಭುತ್ವ ದಿನದಂದು ಬಸವಕಲ್ಯಾಣದಿಂದ ಆರಂಭವಾದ ಬೃಹತ್ ಮಾನವ ಸರಪಳಿಯಲ್ಲಿ ಲಕ್ಷಾಂತರ ಜನರು ಭಾಗವಹಿಸುವ ಮೂಲಕ ರಾಜ್ಯಾದ್ಯಂತ ಅತ್ಯಂತ ಯಶಸ್ವಿಯಾಗಿ ಆಚರಿಸಲಾಗಿತ್ತು.

ಇಂದಿನ ದಿನಗಳಲ್ಲಿ ಸಮಾಜದಲ್ಲಿ ಜಾತಿ-ಧರ್ಮಗಳ ಹೆಸರಿನಲ್ಲಿ ಭಾವನಾತ್ಮಕ ವಿಷಯಗಳನ್ನು ಕೆರಳಿಸಿ, ಸಮಾಜವನ್ನು ಒಡೆಯುವ ಯತ್ನಗಳು ನಡೆಯುತ್ತಿವೆ. ಇದರ ವಿರುದ್ಧ ಪ್ರತಿಯೊಬ್ಬರೂ ಸೋದರತ್ವ, ಸಹಬಾಳ್ವೆ ಹಾಗೂ ಸಾಮರಸ್ಯದ ಸಮಾಜ ನಿರ್ಮಾಣಕ್ಕೆ ಪೂರಕವಾಗಿ ನಿಲ್ಲಬೇಕಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಪರಿಕಲ್ಪನೆಯಂತೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರಕಾರದ ಸೌಲಭ್ಯಗಳು ತಲುಪಿ, ಆತ ಸಬಲನಾದಾಗ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ. ತಳಸಮುದಾಯಗಳ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯು ಇಡೀ ದೇಶಕ್ಕೆ ಶಕ್ತಿ ತರುತ್ತದೆ ಎಂದು ಅಭಿಪ್ರಾಯಪಟ್ಟರು.

ಕೃತಕ ಬುದ್ಧಿಮತ್ತೆ (ಎಐ) ಹಾಗೂ ರೊಬೋಟಿಕ್ಸ್ ಯುಗದಲ್ಲಿ ಜ್ಞಾನವೇ ನಿಜವಾದ ಶಕ್ತಿಯಾಗಿದೆ. ಅಂಬೇಡ್ಕರ್ ಅವರ ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮೂರು ಸೂತ್ರಗಳಂತೆ ಯುವಜನತೆ ಉನ್ನತ ಶಿಕ್ಷಣ ಪಡೆದು ಸ್ಪರ್ಧಾತ್ಮಕ ಜಗತ್ತಿನಲ್ಲಿ ಆತ್ಮವಿಶ್ವಾಸದಿಂದ ಮುನ್ನಡೆಯಬೇಕು ಎಂದು ಸಚಿವರು ಕರೆ ನೀಡಿದರು.

ದೇಶದ ಐಕ್ಯತೆ, ಅಖಂಡತೆ ಹಾಗೂ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ರಕ್ಷಿಸಲು ಪ್ರತಿಯೊಬ್ಬರೂ ಸಂವಿಧಾನಬದ್ಧವಾಗಿ ನಡೆದುಕೊಳ್ಳುವುದು ಅಗತ್ಯ. ಸಂವಿಧಾನವು ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಆಡಳಿತವನ್ನು ಟೀಕಿಸುವ ಹಕ್ಕನ್ನು ನೀಡಿದೆ. ಆದರೆ ಸಮಾಜದಲ್ಲಿ ದ್ವೇಷ ಬಿತ್ತುವುದು ಅಥವಾ ಸುಳ್ಳು ಸುದ್ದಿಗಳನ್ನು ಹಬ್ಬಿಸುವುದು ಸ್ವಾತಂತ್ರ್ಯ ಅಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ಧ್ವನಿ ಅಡಗಿಸುವುದು ಅಥವಾ ಚರ್ಚೆಯಿಲ್ಲದೆ ಶಾಸನಗಳನ್ನು ಅಂಗೀಕರಿಸುವುದು ಸಂವಿಧಾನಕ್ಕೆ ಎಸಗುವ ಧಕ್ಕೆಯಾ ಗಿದೆ. 12ನೇ ಶತಮಾನದಲ್ಲೇ ಬಸವಾದಿ ಶರಣರು 'ಅನುಭವ ಮಂಟಪ'ದ ಮೂಲಕ ಪ್ರಜಾಪ್ರಭುತ್ವಕ್ಕೆ ಬಲಿಷ್ಠ ಬುನಾದಿ ಹಾಕಿದ್ದರು. ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಹಾಗೂ ಬುದ್ಧ, ಬಸವಣ್ಣನವರ ತತ್ವಗಳನ್ನು ವೈಯಕ್ತಿಕ ಜೀವನದಲ್ಲಿ ಅಳವಡಿಸಿಕೊಂಡರೆ ಎಂತಹ ಸವಾಲುಗಳನ್ನೂ ಎದುರಿಸಬಹುದು ಎಂದರು.

ಜಿಲ್ಲೆಯಲ್ಲಿ ಶಿಕ್ಷಣ, ಆರೋಗ್ಯ ಹಾಗೂ ವಸತಿ ಶಾಲೆಗಳ ಮೂಲಸೌಕರ್ಯ ಹೆಚ್ಚಿಸಲು ಆದ್ಯತೆ ನೀಡಲಾಗಿದೆ. ಕೆಕೆಆರ್‌ಡಿಬಿ ಅನುದಾನದಡಿ ?15 ಕೋಟಿ ವೆಚ್ಚದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಕೇಂದ್ರ ಸ್ಥಾಪನೆಗೆ ಅನುಮೋದನೆ ದೊರೆತಿದ್ದು, ಶೀಘ್ರದಲ್ಲೇ ಶಂಕುಸ್ಥಾಪನೆ ನೆರವೇರಲಿದೆ. ವಿವಿಧತೆಯಲ್ಲಿ ಏಕತೆಯೇ ಭಾರತದ ನಿಜವಾದ ಶಕ್ತಿಯಾಗಿದ್ದು, ಜಿಲ್ಲೆಯಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮರಸ್ಯವನ್ನು ಕಾಪಾಡಿಕೊಂಡು ಅಭಿವೃದ್ಧಿಯತ್ತ ಕೊಂಡೊಯ್ಯಲು ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಸಚಿವ, ಬೀದರ ಹಾಲಿ ಶಾಸಕ ರಹೀಮ್ ಖಾನ್ ಮಾತನಾಡಿ, ದೇಶದ ಪ್ರತಿಯೊಬ್ಬ ಪ್ರಜೆಗೂ ಸಮಾನ ಅವಕಾಶ ಸಿಗಲು ಸಂವಿಧಾನವೇ ಮೂಲ ಕಾರಣ, ವಿಶ್ವರತ್ನ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಶಿಕ್ಷಣ ಪಡೆಯುವಾಗ ಸಾಕಷ್ಟು ಅಸಾಮಾನ್ಯತೆ, ಸಲಭ್ಯದ ಕೊರತೆ ಇತ್ತು ಆದರೂ ಅವರು ಉತ್ತಮ ಶಿಕ್ಷಣ ಪಡೆದು ವಿಶ್ವದ ಶ್ರೇಷ್ಠ ಸಂವಿಧಾನ ರಚಿಸಿದ್ದಾರೆ. ಇಂದಿನ ವಿದ್ಯಾರ್ಥಿಗಳಿಗೆ ಸಾಕಷ್ಟು ಅವಕಾಶಗಳಿವೆ ಆದ್ದರಿಂದ ಒಳ್ಳೆಯ ಶಿಕ್ಷಣ ಪಡೆದು ಉತ್ತಮ ನಾಯಕರಾಗಿ ರೂಪಗೊಳ್ಳುವಂತೆ ಕರೆ ನೀಡಿದರು.

ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಭಾಲ್ಕಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಸುಮನಬಾಯಿ ಶಿಂಧೆ, ಪ್ರಜಾಪ್ರಭುತ್ವ ಎಂದರೆ ಕೇವಲ ಚುನಾವಣೆ, ಮತ ಹಾಕುವುದು ಅಥವಾ ಸರ್ಕಾರ ರಚನೆಯಷ್ಟೇ ಅಲ್ಲ; ಅದು ಜನರ ಪಾಲ್ಗೊಳ್ಳುವಿಕೆ, ಸಮಾನತೆ, ಸ್ವಾತಂತ್ರ್ಯ, ನ್ಯಾಯ, ಬಂಧುತ್ವ ಹಾಗೂ ಜವಾಬ್ದಾರಿಯುತ ಆಡಳಿತವಾಗಿದೆ ಎಂದು ಹೇಳಿದರು.

ಭಾರತದಲ್ಲಿ ಪ್ರಜಾಪ್ರಭುತ್ವದ ಬೇರುಗಳು ಅತ್ಯಂತ ಪ್ರಾಚೀನವಾಗಿದ್ದು, 12ನೇ ಶತಮಾನದಲ್ಲಿ ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಬಸವಣ್ಣನವರು ಸ್ಥಾಪಿಸಿದ 'ಅನುಭವ ಮಂಟಪ'ವು ಪ್ರಪಂಚದ ಮೊದಲ ಸಂಸತ್ ಜಗತ್ತಿಗೆ ಮಾದರಿಯಾಗಿತ್ತು. ಇಲ್ಲಿ ಜಾತಿ, ಮತ, ಲಿಂಗ ಭೇದವಿಲ್ಲದೆ ಗಂಗಾಂಬಿಕೆ, ನೀಲಾಂಬಿಕೆ, ಅಕ್ಕಮಹಾದೇವಿ ಸೇರಿದಂತೆ ಎಲ್ಲ ಶರಣ-ಶರಣೆಯರಿಗೆ ಮುಕ್ತ ಚರ್ಚೆಗೆ ಸಮಾನ ಅವಕಾಶ ಕಲ್ಪಿಸಲಾಗಿತ್ತು. ಇದಲ್ಲದೆ, 1881ರಲ್ಲಿ ಮೈಸೂರು ಸಂಸ್ಥಾನದಲ್ಲಿ ಸ್ಥಾಪನೆಯಾದ ಮೈಸೂರು ಪ್ರತಿನಿಧಿ ಸಭೆಯು ಕರ್ನಾಟಕದ ಪ್ರಜಾಸತ್ತಾತ್ಮಕ ಇತಿಹಾಸದಲ್ಲಿ ಪ್ರಮುಖ ಮೈಲಿಗಲ್ಲಾಗಿದೆ ಎಂದರು.

ಇಂದಿನ ಭಾರತೀಯ ಪ್ರಜಾಪ್ರಭುತ್ವದಲ್ಲಿ ಸಾರ್ವತ್ರಿಕ ವಯಸ್ಕ ಮತದಾನ, ಸಂಸದೀಯ ಚರ್ಚೆ, ಸ್ವತಂತ್ರ ನ್ಯಾಯಾಂಗ ಹಾಗೂ ಮೂಲಭೂತ ಹಕ್ಕುಗಳು ಪ್ರಮುಖ ಪಾತ್ರ ವಹಿಸುತ್ತವೆ. ಇಂದಿನ ಯುವಕರೇ ನಾಳೆಯ ಪ್ರಜೆಗಳು. ಆದ್ದರಿಂದ ಯುವಜನತೆ ಸಂವಿಧಾನವನ್ನು ಅರಿತುಕೊಳ್ಳಬೇಕು, ತಮ್ಮ ಹಕ್ಕು ಮತ್ತು ಕರ್ತವ್ಯಗಳನ್ನು ಪಾಲಿಸಬೇಕು ಹಾಗೂ ಸಮಾಜದ ಹಿತಕ್ಕಾಗಿ ಪ್ರಶ್ನಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮಕ್ಕೂ ಮುಂಚೆ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು, ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದರು. ಈ ಜಾಥಾವು ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಪ್ರಾರಂಭವಾಗಿ ನಗರ ವಿವಿಧ ಪ್ರಮುಖ ವೃತ್ತಗಳ ಮೂಲಕ ಸಾಗಿ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ಭೀಮರಾಯನ ಗುಡಿ ಕೃಷ್ಣಾ ಮೇಲ್ದಂಡೆ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸಂಜಯ ಮಠಪತಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠಲ್‌ರಾವ್, ಅಪರ ಜಿಲ್ಲಾಧಿಕಾರಿ ಸುರೇಖಾ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಡಾ. ಯೋಗೀಶ ಎಸ್.ಬಿ ಸೆರಿದಂತೆ ವಿವಿಧ ಸಮಾಜದ ಮುಖಂಡರು, ಸಂಘದ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು, ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕೇಂದ್ರ ಸಾಂಖ್ಯಿಕ ಕಚೇರಿ ಪ್ರಾದೇಶಿಕ ಕ್ರೀಡಾಕೂಟ: ಬಳ್ಳಾರಿಗೆ ಕ್ರಿಕೆಟ್, ಹುಬ್ಬಳ್ಳಿಗೆ ಬ್ಯಾಡ್ಮಿಂಟನ್ ಪ್ರಶಸ್ತಿ



ಬಳ್ಳಾರಿ,ಸೆ.15-

ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಕ್ಷೇತ್ರ ಕಾರ್ಯಾಚರಣೆ ವಿಭಾಗ) ವತಿಯಿಂದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಪ್ರಾದೇಶಿಕ ಮಟ್ಟದ ಕ್ರೀಡಾಕೂಟದಲ್ಲಿ ಬಳ್ಳಾರಿ ಉಪ-ಪ್ರಾದೇಶಿಕ ಕಚೇರಿ ಕ್ರಿಕೆಟ್ ಚಾಂಪಿಯನ್ ಆಗಿ ಹೊರಹೊಮ್ಮಿದರೆ, ಹುಬ್ಬಳ್ಳಿ ಪ್ರಾದೇಶಿಕ ಕಚೇರಿ ಬ್ಯಾಡ್ಮಿಂಟನ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ.

ಹುಬ್ಬಳ್ಳಿ ಪ್ರಾದೇಶಿಕ ಕಚೇರಿ ಆಶ್ರಯದಲ್ಲಿ, ಬಳ್ಳಾರಿ ಉಪ-ಪ್ರಾದೇಶಿಕ ಕಚೇರಿಯ ಆತಿಥ್ಯದಲ್ಲಿ ನಗರದ ವೀರಶೈವ ಪದವಿ ಕಾಲೇಜು ಮೈದಾನದಲ್ಲಿ ಸೆಪ್ಟೆಂಬರ್ 12 ಮತ್ತು 13ರಂದು ಎರಡು ದಿನಗಳ ಕಾಲ ಕ್ರಿಕೆಟ್ ಹಾಗೂ ಬ್ಯಾಡ್ಮಿಂಟನ್ ಪಂದ್ಯಾವಳಿಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕ್ರೀಡಾಕೂಟದಲ್ಲಿ ಬಳ್ಳಾರಿ, ಹುಬ್ಬಳ್ಳಿ, ಕಲಬುರಗಿ ಹಾಗೂ ಬೆಳಗಾವಿ ಕಚೇರಿಗಳ ಒಟ್ಟು ನಾಲ್ಕು ತಂಡಗಳು ಭಾಗವಹಿಸಿ ಜಿದ್ದಾಜಿದ್ದಿನ ಪೈಪೋಟಿ ನಡೆಸಿದವು. ರೋಚಕವಾಗಿ ನಡೆದ ಅಂತಿಮ ಪಂದ್ಯಗಳಲ್ಲಿ ಬಳ್ಳಾರಿ ತಂಡವು ಕ್ರಿಕೆಟ್‌ನಲ್ಲಿ ಜಯಭೇರಿ ಬಾರಿಸಿದರೆ, ಬ್ಯಾಡ್ಮಿಂಟನ್‌ನಲ್ಲಿ ಹುಬ್ಬಳ್ಳಿ ತಂಡ ಗೆಲುವಿನ ನಗೆ ಬೀರಿತು.

ಸಮಾರಂಭದಲ್ಲಿ ಹುಬ್ಬಳ್ಳಿ ಪ್ರಾದೇಶಿಕ ಕಚೇರಿಯ ಉಪ ನಿರ್ದೇಶಕ ಮಹದೇವಪ್ಪ, ಕಲಬುರಗಿ ಉಪ-ಪ್ರಾದೇಶಿಕ ಕಚೇರಿಯ ಪ್ರಭಾರ ಸಹಾಯಕ ನಿರ್ದೇಶಕಿ ಜಾಧವ್ ಸುಜಾತಾ ತಾನಾಜಿ, ಬಳ್ಳಾರಿ ಉಪ-ಪ್ರಾದೇಶಿಕ ಕಚೇರಿಯ ಪ್ರಭಾರ ಸಹಾಯಕ ನಿರ್ದೇಶಕ ಪಾಟೀಲ್ ಸಮೀರ್ ವಸಂತ್ ಹಾಗೂ ವಿವಿಧ ವಿಭಾಗಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಕ್ರೀಡಾಕೂಟಕ್ಕೆ ಅಗತ್ಯ ಮೈದಾನ ಹಾಗೂ ಮೂಲಸೌಕರ್ಯ ಕಲ್ಪಿಸಿ ಸಹಕರಿಸಿದ ವೀರಶೈವ ಸಂಘದ ಅಧ್ಯಕ್ಷ ಡಾ. ಕೆ.ಎಸ್. ಮಹಾಂತೇಶ್ ಹಾಗೂ ಕಾರ್ಯದರ್ಶಿ ಡಾ. ಅರವಿಂದ್ ಪಾಟೀಲ್ ಅವರಿಗೆ ಆಯೋಜಕರು ಕೃತಜ್ಞತೆ ಸಲ್ಲಿಸಿದರು. ಪಂದ್ಯಾವಳಿಯ ಅಚ್ಚುಕಟ್ಟು ಆಯೋಜನೆ ಹಾಗೂ ಆತಿಥ್ಯಕ್ಕೆ ಅಧಿಕಾರಿಗಳು ಮತ್ತು ಕ್ರೀಡಾಪಟುಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಕಲ್ಯಾಣ ಕರ್ನಾಟಕ ಉತ್ಸವ: ಬಳ್ಳಾರಿಯಲ್ಲಿ ಸಚಿವ ಟಿ. ರಘುಮೂರ್ತಿ ಅವರಿಂದ ಧ್ವಜಾರೋಹಣ

ಬಳ್ಳಾರಿ,ಸೆ.16-

ಸೆಪ್ಟೆಂಬರ್ 17ರಂದು ನಡೆಯಲಿರುವ ಐತಿಹಾಸಿಕ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಅಂಗವಾಗಿ ಬಳ್ಳಾರಿ ಜಿಲ್ಲಾ ಕೇಂದ್ರದಲ್ಲಿ ಧ್ವಜಾರೋಹಣ ನೆರವೇರಿಸಲು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರಾದ ಟಿ. ರಘುಮೂರ್ತಿ ಅವರನ್ನು ರಾಜ್ಯ ಸರ್ಕಾರ ನೇಮಕ ಮಾಡಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜ್ಯ ಶಿಷ್ಟಾಚಾರ) ಅಧಿಕೃತ ಆದೇಶ ಹೊರಡಿಸಿದ್ದು, ಕಲ್ಯಾಣ ಕರ್ನಾಟಕ ಭಾಗದ ಒಟ್ಟು 7 ಜಿಲ್ಲೆಗಳಿಗೆ ಉಸ್ತುವಾರಿ ಸಚಿವರನ್ನು ನಿಯೋಜಿಸಲಾಗಿದೆ ಎಂದು ಸರ್ಕಾರದ ಅಧೀನ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಕಲಬುರಗಿ ಮಹಾನಗರ ಪಾಲಿಕೆ: ಮಹಾಪೌರರಾಗಿ ಶೈಕ್ ಅಜ್ಮಲ ಅಹ್ಮದ ಅಫಲ ಗೋಲಾ, ಉಪ ಮೇಯರ್ ಫರ್ಹಾನಾಜ ಅಧಿಕಾರಿ ಸ್ವೀಕಾರ



ಕಲಬುರಗಿ, ಸೆ.15-

ಕಲಬುರಗಿ ಮಹಾನಗರ ಪಾಲಿಕೆಯ 24ನೇ ಅವಧಿಗೆ ನೂತನ ಮಹಾಪೌರರಾಗಿ ಶೈಕ್ ಅಜ್ಮಲ ಅಹ್ಮದ ಅಫ್ಜಲ್ ಗೋಲಾ ಮತ್ತು ಉಪ ಮಹಾಪೌರರಾಗಿ ಫರ್ಹಾನಾಜ (ಫರ್ಹಾ ಖುಸ್ರೂ ಜಾಗಿರದಾರ) ಅವರು ಮಂಗಳವಾರ ಮಧ್ಯಾಹ್ನ ಪಾಲಿಕೆಯ ಕಚೇರಿ ಯಲ್ಲಿ ಅಧಿಕಾರ ವಹಿಸಿಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಮೇಯರ್ ಅವರು, ನಗರದಲ್ಲಿ ಎದುರಾಗಿರುವ ಕುಡಿಯುವ ನೀರು, ನಾಯಿಗಳ ಹಾವಳಿ ಹಾಗೂ ತ್ಯಾಜ್ಯ ನಿರ್ವಹಣೆ ಮುಂತಾದ ಜ್ವಲಂತ ಸಮಸ್ಯೆಗಳಿಗೆ ಆದ್ಯತೆಯ ಮೇಲೆ ಶೀಘ್ರ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಹೇಳಿದರು. ತಮ್ಮ ತಂದೆಯವರು 1991ರಲ್ಲಿ ಮೇಯರ್ ಆಗಿದ್ದು, ಸುಮಾರು 35 ವರ್ಷಗಳ ನಂತರ ತಮಗೂ ಅದೇ ಹುದ್ದೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿರುವುದು ಅತ್ಯಂತ ಭಾವನಾತ್ಮಕ ಕ್ಷಣವಾಗಿದೆ ಎಂದರು. ನಗರದ ಸರ್ವಾಂಗೀಣ ಅಭಿ ವೃದ್ಧಿಗೆ ಹಲವು ಯೋಜನೆಗಳನ್ನು ತಿಳಿಸಿದ ಅವರು, ಮಳೆನೀರು ಕೊಯ್ಲು, ಪ್ರತಿಯೊಂದು ಮನೆಗೂ ಸಸಿ ಅಭಿಯಾನ ಮತ್ತು ಪಾಲಿಕೆ ಆಡಳಿತವನ್ನು ಸುಗಮಗೊಳಿಸಲು ಕಂಟ್ರೋಲ್ ಕಮಾಂಡ್ ಸೆಂಟರ್ ಸ್ಥಾಪಿಸುವುದಾಗಿ ತಿಳಿಸಿದರು. ನಿಯಮಿತವಾಗಿ ಜನೋಪಯೋಗಿ ವಿಷಯಗಳಿಗಷ್ಟೇ ಮೀಸಲಾದ ಸಾಮಾನ್ಯ ಸಭೆಗಳನ್ನು ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಕನೀಜ್ ಫಾತಿಮಾ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಕಿರಣ್ ದೇಶಮುಖ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಹಬ್ಬ-ಆಚರಣೆಗಳೇ ಬಿಜೆಪಿಯ ಅಸ್ತ್ರ; ಜನತೆ ಎಚ್ಚೆತ್ತುಕೊಳ್ಳಲಿ!

ತನ್ನ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಧಾರ್ಮಿಕ ಆಚರಣೆಗಳ ಪಾವಿತ್ರ್ಯವನ್ನು ಹಾಳುಗೆಡವುವ, ಹಬ್ಬಗಳನ್ನು ಕೋಮುವಾದಿ ಹತಾರನ್ನಾಗಿ ಬಳಸಿಕೊಳ್ಳುವ ಬಿಜೆಪಿಯ ಚಾಳಿಗೆ ಕೊನೆಯಿಲ್ಲ. ತಿ. ನರಸೀಪುರದ ಗಣೇಶೋತ್ಸವದ ಹೆಸರಿನಲ್ಲಿ ನಡೆದ ಗಲಭೆ ಹಾಗೂ ಪ್ರತಿಭಟನೆಗಳು ಇದಕ್ಕೆ ತಾಜಾ ನಿದರ್ಶನ. ಧರ್ಮದ ರಾಜಕಾರಣದ ಮೂಲಕ ಜನಸಾಮಾನ್ಯರ ದೈನಂದಿನ ನೆಮ್ಮದಿಗೂ ಕಲ್ಲು ಹಾಕುತ್ತಿರುವ ಬಿಜೆಪಿಯ ಈ ಕಪಟ ನಾಟಕವನ್ನು ನಾಡಿನ ಪ್ರಜ್ಞಾವಂತರು ತೀವ್ರವಾಗಿ ಖಂಡಿಸಬೇಕಿದೆ.

ಮೈಸೂರು ಜಿಲ್ಲೆಯ ತಿ. ನರಸೀಪುರದಲ್ಲಿ ಗಣೇಶೋತ್ಸವದ ಮೆರವಣಿಗೆಗೆ ಸಂಬಂಧಿಸಿದಂತೆ ಸ್ಥಳೀಯ ಪೊಲೀಸ್ ಇನ್ಸ್ ಪೆಕ್ಟರ್ ಧನಂಜಯ್ ಅವರು, ಮಸೀದಿಗಳ ಬಳಿ ತೆರಳುವಾಗ ಪಟಾಕಿ ಸಿಡಿಸುವುದು ಮತ್ತು ಧ್ವನಿವರ್ಧಕ ಬಳಕೆಗೆ ಮುಂಚಿತವಾಗಿ ಮಾಹಿತಿ ನೀಡಿ ಸೂಕ್ತ ಭದ್ರತೆ ಕೈಗೊಳ್ಳುವಂತೆ ಸೂಚಿಸಿದ್ದರು. ಇದನ್ನು ಹಿಂದೂ ಸಂಘಟಕರಿಗೆ ಬೆದರಿಕೆ ಹಾಕಲಾಗಿದೆ ಎಂದು ತಿರುಚಿ ಬಿಜೆಪಿ ನಾಯಕರು ಊಳಿಟ್ಟರು. ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮತ್ತು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನೇತೃತ್ವದಲ್ಲಿ ಬಿಜೆಪಿ ನಾಯಕರು ಪೊಲೀಸ್ ಠಾಣೆ ಎದುರು ರಾತ್ರಿಯಿಡೀ ಪ್ರತಿಭಟನೆ ನಡೆಸಿ, ಇನ್ಸ್ ಪೆಕ್ಟರ್ ಅವರನ್ನು ತಕ್ಷಣ ಅಮಾನತುಗೊಳಿಸಬೇಕೆಂದು ಪಟ್ಟು ಹಿಡಿದರು.

ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಕಳೆದ ವರ್ಷದ ಸಾಂಪ್ರದಾಯಿಕ ಮಾರ್ಗಗಳಲ್ಲೇ ಈ ವರ್ಷವೂ ಮೆರವಣಿಗೆಗೆ ಅವಕಾಶವಿದ್ದು, ಯಾವುದೇ ಹೊಸ ನಿರ್ಬಂಧ ವಿಧಿಸಿಲ್ಲ ಎಂದು ಸ್ಪಷ್ಟಪಡಿಸಿದರೂ, ಬಿಜೆಪಿ ಮಾತ್ರ ಇದನ್ನು ''ಹಿಂದೂ ವಿರೋಧಿ'' ಸರ್ಕಾರದ ನೀತಿಯೆಂದು ಬಿಂಬಿಸಿ ಕೋಮು ಸೌಹಾರ್ದ ಕೆಡಿಸಲು ಯತ್ನಿಸಿತು.

ಕರ್ನಾಟಕದಲ್ಲಿ ಗಣೇಶೋತ್ಸವ, ದತ್ತಪೀಠ, ಟಿಪ್ಪು ಜಯಂತಿ, ಹಿಜಾಬ್‌ನಂತಹ ಹತ್ತು ಹಲವು ವಿಷಯಗಳನ್ನು ಮುಂದಿಟ್ಟುಕೊಂಡು ಬಿಜೆಪಿ ವ್ಯವಸ್ಥಿತವಾಗಿ ಕೋಮು ದ್ವೇಷ ಸೃಷ್ಟಿಸುತ್ತಾ ಬಂದಿದೆ. ಹಬ್ಬಗಳು ಜನರನ್ನು ಒಗ್ಗೂಡಿಸುವ ಸಾಮರಸ್ಯದ ಸೇತುವೆಗಳಾಗಬೇಕು. ಆದರೆ ಬಿಜೆಪಿ ನಾಯಕರಿಗೆ ಅವು ಸಮಾಜವನ್ನು ವಿಭಜಿಸುವ, ಎರಡು ಗುಂಪುಗಳ ನಡುವೆ ದ್ವೇಷದ ಕಿಡಿ ಹೊತ್ತಿಸುವ ರಾಜಕೀಯ ದಾಳಗಳಾಗಿ ಮಾತ್ರ ಕಾಣಿಸುತ್ತವೆ. ತಿ. ನರಸೀಪುರದಲ್ಲೂ ಕೂಡ ಬಿಜೆಪಿ ನಾಯಕರು ಇಲ್ಲಸಲ್ಲದ ಸುಳ್ಳು ಆರೋಪಗಳನ್ನು ಸೃಷ್ಟಿಸಿ ಪೊಲೀಸ್ ಠಾಣೆ ಎದುರು ರಾತ್ರಿಯಿಡೀ ಗಲಾಟೆ ಎಬ್ಬಿಸಿ, ಕಾನೂನನ್ನು ಕೈಗೆ ತೆಗೆದುಕೊಂಡು ದುರಹಂಕಾರ ಮೆರೆದರು.

ಚಿಕ್ಕಮಗಳೂರಿನ ದತ್ತಪೀಠವನ್ನು ದಕ್ಷಿಣ ಭಾರತದ ಅಯೋಧ್ಯೆಯನ್ನಾಗಿ ಬಿಂಬಿಸಲು ಸಂಘ ಪರಿವಾರ ಮತ್ತು ಬಿಜೆಪಿ ದಶಕಗಳಿಂದ ಯತ್ನಿಸುತ್ತಿವೆ. ಹಿಂದೂ ಮತ್ತು ಮುಸ್ಲಿಂ ಸಮುದಾಯಗಳು ಶತಮಾನಗಳಿಂದ ಒಟ್ಟಾಗಿ ಆಚರಿಸಿಕೊಂಡು ಬರುತ್ತಿದ್ದ ಸಾಂಪ್ರದಾಯಿಕ ಆಚರಣೆಗಳನ್ನು ಬದಿಗಿಟ್ಟು, ಇದನ್ನು ಸಂಪೂರ್ಣವಾಗಿ ಹಿಂದೂ ಧಾರ್ಮಿಕ ಕ್ಷೇತ್ರವನ್ನಾಗಿ ಪರಿವರ್ತಿಸಲು ಮತ್ತು ದತ್ತ ಜಯಂತಿಯ ಹೆಸರಿನಲ್ಲಿ ಪ್ರತಿವರ್ಷ ಕೋಮು ಉದ್ವಿಗ್ನತೆ ಸೃಷ್ಟಿಸಿ ರಾಜಕೀಯ ಬೇಳೆ ಬೇಯಿಸಿಕೊಳ್ಳುವುದು ಬಿಜೆಪಿಯ ಖಾಯಂ ತಂತ್ರವಾಗಿಬಿಟ್ಟಿದೆ.

2015ರಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಮೈಸೂರು ಹುಲಿ ಟಿಪ್ಪು ಸುಲ್ತಾನ್ ಜಯಚರಣೆಯನ್ನು ಅಧಿಕೃತವಾಗಿ ಆಚರಿಸಲು ಮುಂದಾದಾಗ, ಬಿಜೆಪಿ ಇದನ್ನು ತೀವ್ರವಾಗಿ ವಿರೋಧಿಸಿತು. ಟಿಪ್ಪುವನ್ನು ಒಬ್ಬ ದೇಶಪ್ರೇಮಿ ದೊರೆಯಿಂದ ಮತಾಂತರಗೊಳಿಸಿದ ಚಕ್ರವರ್ತಿಯಂತೆ ಬಿಂಬಿಸಿ, ಹಿಂದೂ-ಮುಸ್ಲಿಂ ಭಾವನೆಗಳ ನಡುವೆ ದೊಡ್ಡ ಕಂದಕ ಸೃಷ್ಟಿಸಿತು. ಕೊಡಗು ಸೇರಿದಂತೆ ಕೆಲವು ಕಡೆಗಳಲ್ಲಿ ನಡೆದ ಸಂಘರ್ಷಗಳು ಹಾಗೂ ಗಲಭೆಗಳನ್ನು ಬಿಜೆಪಿ ತನ್ನ ರಾಜಕೀಯ ಬೇರುಗಳನ್ನು ಗಟ್ಟಿಗೊಳಿಸಲು ಭರ್ಜರಿಯಾಗಿ ಬಳಸಿಕೊಂಡಿತು.

2017ರಲ್ಲಿ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರದಲ್ಲಿ ನಡೆದ ಸಾವೊಂದಕ್ಕೆ ರಾಜಕೀಯ ಹಾಗೂ ಕೋಮುವಾದಿ ಬಣ್ಣ ಬಳಿದು, ರಾಜ್ಯಾದ್ಯಂತ ಅಶಾಂತಿ ಮತ್ತು ದೊಡ್ಡ ಮಟ್ಟದ ಗಲಭೆಗಳಿಗೆ ಕಾರಣವಾಗುವಂತೆ ಬಿಂಬಿಸಲಾಗಿತ್ತು. ನಂತರ ತನಿಖೆಯಲ್ಲಿ ಅದು ಕೋಮು ಹತ್ಯೆಯಲ್ಲ ಎಂದು ಸ್ಪಷ್ಟವಾದರೂ, ಅಲ್ಲಿಯವರೆಗೆ ರಾಜಕೀಯ ಲಾಭಿಗಾಗಿ ಸಂಘಪರಿವಾರ ಹೆಣೆದಿದ್ದ ಧ್ರುವೀಕರಣ ತಂತ್ರ ಯಶಸ್ವಿಯಾಗಿ ಬಳಕೆಯಾಗಿತ್ತು.

ಇನ್ನು 2022ರಲ್ಲಿ ಉಡುಪಿಯ ಕಾಲೇಜೊಂದರಲ್ಲಿ ಆರಂಭವಾದ ಹಿಜಾಬ್ ಧರಿಸುವ ಸಣ್ಣ ವಿಷಯವನ್ನು ದೊಡ್ಡದಾಗಿ ಬಿಂಬಿಸಿ ರಾಜ್ಯಮಟ್ಟದ ಬಿಕ್ಕಟ್ಟನ್ನಾಗಿ ಪರಿವರ್ತಿಸುವಲ್ಲಿ ಬಿಜೆಪಿ ಮತ್ತು ಅದರ ಮಾತೃಸಂಸ್ಥೆಗಳು ಯಶಸ್ವಿಯಾದವು. ಶಾಲೆ-ಕಾಲೇಜುಗಳ ತರಗತಿಗಳ ಒಳಗೂ ಧರ್ಮದ ಗೋಡೆಗಳನ್ನು ನಿರ್ಮಿಸಿ ವಿದ್ಯಾರ್ಥಿಗಳನ್ನು ವಿಭಜಿಸಲಾಯಿತು. ಇದರ ಬೆನ್ನಲ್ಲೇ ಮುಸ್ಲಿಮರ ವ್ಯಾಪಾರ-ವಹಿವಾಟುಗಳನ್ನು ಗುರಿಯಾಗಿಸಿ ಹಲಾಲ್ ಕಟ್ ವಿವಾದವನ್ನು ಹುಟ್ಟುಹಾಕಿ, ಆರ್ಥಿಕ ಹಾಗೂ ಸಾಮಾಜಿಕ ಬಹಿಷ್ಕಾರದ ವಾತಾವರಣವನ್ನೂ ಸೃಷ್ಟಿಸಲಾಯಿತು.

ಸಾರ್ವಜನಿಕ ಮೈದಾನಗಳಲ್ಲಿ ಧಾರ್ಮಿಕ ಆಚರಣೆಗಳ ನಿಯಮಗಳನ್ನು ಮೀರಿ ಗಣೇಶೋತ್ಸವ ಅಥವಾ ಇತರೆ ಹಿಂದೂ ಹಬ್ಬಗಳನ್ನು ಆಚರಿಸಲು ಒತ್ತಡ ಹೇರುವುದು, ಸ್ಥಳೀಯ ಆಡಳಿತದೊಂದಿಗೆ ಉದ್ದೇಶಪೂರ್ವಕವಾಗಿ ಸಂಘರ್ಷಕ್ಕಿಳಿಯುವುದು ಮತ್ತು ಅದನ್ನು ರಾಷ್ಟ್ರೀಯವಾದ ವರ್ಸಸ್ ಮುಸ್ಲಿಮರ ಅತಿಪ್ರಸಂಗ ಎಂಬಂತೆ ಬಿಂಬಿಸಿ ಚುನಾವಣಾ ಧ್ರುವೀಕರಣ ಸಾಧಿಸುವುದು ಬಿಜೆಪಿಯ ಕುತಂತ್ರ. ಹುಬ್ಬಳ್ಳಿ ಮತ್ತು ಶಿವಮೊಗ್ಗದಲ್ಲಿ ಸೃಷ್ಟಿಸಿದ್ದ ಈದ್ಗಾ ಮೈದಾನದ ವಿವಾದಗಳೂ ಇದೇ ಸಾಲಿಗೆ ಸೇರುತ್ತವೆ.

ಹಬ್ಬಗಳ ಆಚರಣೆಯ ಹಕ್ಕು ಯಾರೊಬ್ಬರ ರಾಜಕೀಯ ಸ್ವತ್ತೂ ಅಲ್ಲ. ಗಣೇಶೋತ್ಸವವಾಗಲಿ, ದತ್ತ ಜಯಂತಿಯಾಗಲಿ, ಈದ್ ಆಗಲಿ, ಕ್ರಿಸ್‌ಮಸ್ ಆಗಲಿ.. ಎಲ್ಲ ಧರ್ಮಗಳ ಆಚರಣೆಗಳಿಗೂ ಸಮಾನ ಗೌರವ ಮತ್ತು ಕಾನೂನುಬದ್ಧ ರಕ್ಷಣೆ ದೊರೆಯಬೇಕು. ಕೇವಲ ಅಧಿಕಾರ ಮತ್ತು ರಾಜಕೀಯ ಲಾಭಕ್ಕಾಗಿ ಜನರ ಭಾವನೆಗಳನ್ನು ಕೆರಳಿಸಿ, ಅಶಾಂತಿಯ ಬೆಂಕಿ ಹಚ್ಚುವ ಮೂಲಕ ಸಮಾಜದಲ್ಲಿ ಶಾಶ್ವತವಾದ ಧರ್ಮದ ಕಂದಕಗಳನ್ನು ಸೃಷ್ಟಿಸುತ್ತಿರುವ ಈ ವಿನಾಶಕಾರಿ ಧೋರಣೆಯನ್ನು ಪ್ರಶ್ನಿಸದೆ ಸುಮ್ಮನಿರುವುದು ಸಾಧ್ಯವಿಲ್ಲ.

ಹಬ್ಬಗಳು ಜನರನ್ನು ಒಗ್ಗೂಡಿಸುವ, ಪ್ರೀತಿ ಮತ್ತು ವಿಶ್ವಾಸವನ್ನು ಬಿತ್ತುವ ಪವಿತ್ರ ಸೇತುವೆಗಳಾಗಬೇಕೇ ಹೊರತು, ಸಮಾಜವನ್ನು ವಿಭಜಿಸುವ ದ್ವೇಷದ ಅಸ್ತ್ರಗಳಾಗಬಾರದು. ಆಡಳಿತ ಯಂತ್ರ ಹಾಗೂ ಪೊಲೀಸ್ ಇಲಾಖೆಯು ಯಾವುದೇ ರಾಜಕೀಯ ನಾಯಕರ ಒತ್ತಡಗಳಿಗೆ, ಬೆದರಿಕೆಗಳಿಗೆ ಅಥವಾ ಧಮಕಿಗಳಿಗೆ ಕಿಂಚಿತ್ತೂ ಮಣಿಯದೆ, ಕಾನೂನುಬಾಹಿರವಾಗಿ ಸಮಾಜದ ನೆಮ್ಮದಿ ಕೆಡಿಸುವ ಹಾಗೂ ಗಲಭೆ ಸೃಷ್ಟಿಸುವ ಶಕ್ತಿಗಳ ವಿರುದ್ಧ ನಿರ್ದಾಕ್ಷಿಣ್ಯ ಹಾಗೂ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಸಮಾಜದಲ್ಲಿ ಅಣ್ಣತಮ್ಮಂದಿರಂತೆ ಬಾಳುತ್ತಿರುವ ಜನತೆಯ ನಡುವೆ ದ್ವೇಷದ ವಿಷಬೀಜ ಬಿತ್ತುವವರ ಕುತಂತ್ರಗಳನ್ನು ಮಟ್ಟಹಾಕಲು ಆಡಳಿತದ ದೃಢತೆಯಷ್ಟೇ ಜನತೆಯ ಎಚ್ಚರಿಕೆಯೂ ಮುಖ್ಯ. ಕರ್ನಾಟಕಕ್ಕೆ ಕೋಮು ಸೌಹಾರ್ದದ ಶ್ರೀಮಂತ ಪರಂಪರೆಯೇ ಉಂಟು. ಅದನ್ನು ಕಾಪಾಡಿಕೊಳ್ಳಲು ನಾಡಿನ ಪ್ರಜ್ಞಾವಂತ ಜನತೆ ಒಗ್ಗಟ್ಟಾಗಿ ನಿಲ್ಲಬೇಕಿದೆ. ಬಿಜೆಪಿಯ ಈ ಎಲ್ಲ ಕೋಮುವಾದಿ ಹುನ್ನಾರಗಳನ್ನು ಮತ್ತು ಸಂಕುಚಿತ ರಾಜಕೀಯ ಅಪಪ್ರಚಾರಗಳನ್ನು ಸಾರಾಸಗಟಾಗಿ ತಿರಸ್ಕರಿಸಬೇಕಿದೆ.

ಪ್ರಜಾಪ್ರಭುತ್ವದ ಅಣಕ: ಪಕ್ಷಾಂತರಕ್ಕಾಗಿ ಶಾಸಕರ ರಾಜೀನಾಮೆ ಮತ್ತು ಮರು ಸ್ಪರ್ಧೆಗೆ ಮದ್ರಾಸ್ ಹೈಕೋರ್ಟ್ ಕಿಡಿ

ಚುನಾವಣೆಯಲ್ಲಿ ಗೆದ್ದ ಕೆಲವೇ ದಿನಗಳಲ್ಲಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ, ಪಕ್ಷಾಂತರಗೊಂಡು ಅದೇ ಕ್ಷೇತ್ರದಲ್ಲಿ ಮರುಚುನಾವಣೆಗೆ ಸ್ಪರ್ಧಿಸುವ ರಾಜಕೀಯ ಶೈಲಿಯ ವಿರುದ್ಧ ಮದ್ರಾಸ್ ಹೈಕೋರ್ಟ್ ತೀವ್ರ ಕಳವಳ ವ್ಯಕ್ತಪಡಿಸಿದೆ. ಇಂತಹ ನಡವಳಿಕೆಯು ಪ್ರಜಾಪ್ರಭುತ್ವದ ಅಣಕ ಮತ್ತು ಮತದಾರರಿಗೆ ಎಸಗುವ ಮಹಾ ದ್ರೋಹ ಎಂದು ಹೈಕೋರ್ಟ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ತಮಿಳುನಾಡಿನ ಆಡಳಿತಾರೂಢ ಟಿವಿಕೆ ಪಕ್ಷವು ಇತ್ತೀಚೆಗೆ ಎಐಎಡಿಎಂಕೆ ತೊರೆದು ಬಂದಿದ್ದ ಇಬ್ಬರು ಮಾಜಿ ಶಾಸಕರಾದ ಮರಗತಂ ಕುಮಾರವೇಲ್ ಮತ್ತು ಪಿ. ಸತ್ಯಭಾಮ ಅವರಿಗೆ ಉಪಚುನಾವಣೆಯಲ್ಲಿ ಟಿಕೆಟ್ ಘೋಷಿಸಿತ್ತು. ಮಧುರಾಂತಕಂ ಮತ್ತು ಧಾರಾಪುರಂ ಕ್ಷೇತ್ರಗಳಿಗೆ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಟಿವಿಕೆ ಸೇರಿದ್ದ ಈ ಇಬ್ಬರೂ ನಾಯಕರು, ಅದೇ ಕ್ಷೇತ್ರಗಳಿಂದ ಮರುಸ್ಪರ್ಧೆಗೆ ಇಳಿದಿರುವುದನ್ನು ಪ್ರಶ್ನಿಸಿ ಪಿಐಎಲ್ ಸಲ್ಲಿಸಲಾಗಿತ್ತು. ಆ ಅರ್ಜಿಯನ್ನು ಹೈಕೋರ್ಟ್ ವಿಚಾರಣೆ ನಡೆಸಿದೆ.

ನ್ಯಾಯಮೂರ್ತಿಗಳಾದ ಎಸ್.ಎಂ. ಸುಬ್ರಮಣ್ಯಂ ಮತ್ತು ಕೆ. ಗೋವಿಂದರಾಜನ್ ಅವರ ನ್ನೊಳಗೊಂಡ ಪೀಠವು, ''ಶಾಸಕರು ಜನಪ್ರತಿನಿಧಿ ಗಳಾಗಿ ಆಯ್ಕೆಯಾಗುವುದು ಜನರ ನಂಬಿಕೆಯ ಆಧಾರದ ಮೇಲೆ. ಅಧಿಕಾರಕ್ಕೆ ಬಂದ ತಕ್ಷಣ ರಾಜೀ ನಾಮೆ ನೀಡಿ, ಮತ್ತೆ ಅದೇ ಜನರೆದುರು ವೋಟಿಗಾಗಿ ನಿಲ್ಲುವುದು ಮತದಾರರಿಗೆ ಮಾಡುವ ಅಪಮಾನ'' ಎಂದು ಹೇಳಿದೆ.

ಇಂತಹ ಪ್ರವೃತ್ತಿಗೆ ಕಡಿವಾಣ ಹಾಕಲು ಸೂಕ್ತ ಮಾರ್ಗದರ್ಶಿ ಸೂತ್ರಗಳನ್ನು ರೂಪಿಸುವಂತೆ ಕೇಂದ್ರ ಚುನಾವಣಾ ಆಯೋಗಕ್ಕೆ ನಿರ್ದೇಶನವನ್ನೂ ನೀಡಿದೆ.

ಅರ್ಜಿದಾರರ ಪರ ವಾದ ಮಂಡಿಸಿದ ವಕೀಲ ಸುಧನ್, ''ರಾಜಕೀಯ ಲಾಭಕ್ಕಾಗಿ ಶಾಸಕರು ನೀಡುವ ದಿಢೀರ್ ರಾಜೀನಾಮೆಗಳಿಂದಾಗಿ ಮರುಚುನಾವಣೆ ನಡೆಸಲು ತೆರಿಗೆದಾರರ ಹಣ ವ್ಯರ್ಥವಾಗುತ್ತಿದೆ. ಹೀಗೆ ರಾಜೀನಾಮೆ ನೀಡುವ ಜನಪ್ರತಿನಿಧಿಗಳಿಗೆ ಚುನಾವಣಾ ವೆಚ್ಚದ ದಂಡ ವಿಧಿಸಬೇಕು. ನಿರ್ದಿಷ್ಟ ಅವಧಿಯವರೆಗೆ ಸ್ಪರ್ಧಿಸದಂತೆ ನಿಷೇಧ ಹೇರಬೇಕು'' ಎಂದು ಮನವಿ ಮಾಡಿದ್ದರು.

ಬಳ್ಳಾರಿ ಚಲೋ ಕಾಂಗ್ರೆಸ್ ಭದ್ರಕೋಟೆಯಲ್ಲಿ ಬಿಜೆಪಿ ಪಾದಯಾತ್ರೆ; ಲಾಭ ಯಾರಿಗೆ?

ವಿಧಾನಸಭೆ ಚುನಾವಣೆಯಲ್ಲಿ ಜಿಲ್ಲೆಯ ಎಲ್ಲಾ ಐದು ವಿಧಾನಸಭಾ ಕ್ಷೇತ್ರಗಳನ್ನು ಗೆದ್ದು ಕಾಂಗ್ರೆಸ್ ಬಿಜೆಪಿ ಪಕ್ಷವನ್ನು ಸಂಪೂರ್ಣವಾಗಿ ಮಣಿಸಿತ್ತು. ಲೋಕಸಭಾ ಚುನಾವಣೆಯಲ್ಲಿಯೂ ಕಾಂಗ್ರೆಸ್ ತನ್ನ ಪ್ರಾಬಲ್ಯವನ್ನು ಮುಂದುವರಿಸಿತು. ಇತ್ತೀಚೆಗೆ ನಡೆದ ಸಂಡೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿಯೂ ಕಾಂಗ್ರೆಸ್ ಜಯಭೇರಿ ಬಾರಿಸುವ ಮೂಲಕ ಜಿಲ್ಲೆಯಲ್ಲಿ ತನ್ನ ಹಿಡಿತವನ್ನು ಮತ್ತಷ್ಟು ಗಟ್ಟಿಗೊಳಿಸಿಕೊಂಡಿದೆ. ಸದ್ಯ ಬಿಜೆಪಿ ಕೈಗೊಂಡಿರುವ ಬಳ್ಳಾರಿ ಚಲೋ ಪಾದಯಾತ್ರೆ ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಕಂಟಕವಾಗಲಿದೆಯೇ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ಆರಂಭವಾಗಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ಆರೋಪದ ಹಿನ್ನೆಲೆಯಲ್ಲಿ ಅಂದಿನ ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಪಾದಯಾತ್ರೆ ನಡೆಸುವುದಾಗಿ ಘೋಷಿಸಿತ್ತು. ಆದರೆ ಬಿ.ನಾಗೇಂದ್ರ ಅವರು ಆ.28ರಂದೇ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರೂ ಬಿಜೆಪಿ ತನ್ನ ಹೋರಾಟವನ್ನು ಕೈಬಿಡದೆ ಪಾದಯಾತ್ರೆಯನ್ನು ಮುಂದುವರಿಸಿದೆ. ಇದೀಗ ಸರ್ಕಾರದ ವೈಫಲ್ಯ, ದುರಾಡಳಿತ ಹಾಗೂ ದಲಿತ ವಿರೋಧಿ ಧೋರಣೆಗಳನ್ನು ಜನರ ಮುಂದಿಟ್ಟು ಜನಾಂದೋಲನ ರೂಪಿಸುವ ಉದ್ದೇಶದಿಂದ ಬಿಜೆಪಿ ಬಳ್ಳಾರಿ ಚಲೋ ಮೂಲಕ ಸರ್ಕಾರದ ವಿರುದ್ಧ ರಾಜಕೀಯ ಸಮರಕ್ಕೆ ಮುಂದಾಗಿದೆ.

ಕಾಂಗ್ರೆಸ್ ಭದ್ರಕೋಟೆಯಲ್ಲಿ ಬಿಜೆಪಿ ಹೆಜ್ಜೆ

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಐದು ಲೋಕಸಭಾ ಸ್ಥಾನಗಳನ್ನು ಗೆದ್ದು ಮೇಲುಗೈ ಸಾಧಿಸಿರುವ ಹಿನ್ನೆಲೆಯಲ್ಲಿ ಬಳ್ಳಾರಿ ಚಲೋಗೆ ರಾಜಕೀಯ ಮಹತ್ವ ದೊರೆತಿದೆ. ವಿಶೇಷವಾಗಿ ಬಳ್ಳಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪ್ರಾಬಲ್ಯ ಹೊಂದಿರುವ ಸಂದರ್ಭದಲ್ಲಿ ಬಿಜೆಪಿ ನಡೆಸುತ್ತಿರುವ ಈ ಪಾದಯಾತ್ರೆ ಪಕ್ಷದ ಸಂಘಟನೆಗೆ ಎಷ್ಟು ಬಲ ನೀಡಲಿದೆ ಎಂಬುದು ಕುತೂಹಲ ಮೂಡಿಸಿದೆ.

ಲಿಂಗಸುಗೂರಿನಿಂದ ಆರಂಭಗೊಂಡ ಪಾದಯಾತ್ರೆ, ಬಳ್ಳಾರಿ ನಗರದತ್ತ ಸಾಗುವ ಮಾರ್ಗದಲ್ಲಿ ಹಲವು ವಿಧಾನಸಭಾ ಕ್ಷೇತ್ರಗಳನ್ನು ಹಾದು ಬಂದಿದೆ. ಈ ಕ್ಷೇತ್ರಗಳ ರಾಜಕೀಯ ಫಲಿತಾಂಶಗಳನ್ನು ಗಮನಿಸಿದರೆ ಕಾಂಗ್ರೆಸ್ ಮೇಲುಗೈ ಸಾಧಿಸಿರುವ ಕ್ಷೇತ್ರಗಳೇ ಹೆಚ್ಚಿನ ಸಂಖ್ಯೆಯಲ್ಲಿವೆ.

ಲಿಂಗಸುಗೂರು ಕ್ಷೇತ್ರದಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದರೆ, ಮಸ್ಕಿ ಮತ್ತು ಸಿಂಧನೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆದ್ದಿದೆ. ಕೊಪ್ಪಳ ಜಿಲ್ಲೆಯ ಕನಕಗಿರಿ-ಕಾರಟಗಿ ಕ್ಷೇತ್ರದಲ್ಲಿಯೂ ಕಾಂಗ್ರೆಸ್ ಮೇಲುಗೈ ಸಾಧಿಸಿದೆ. ಗಂಗಾವತಿಯಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದರೆ, ಕಂಪ್ಲಿ ಮತ್ತು ಸಂಡೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆದ್ದಿದೆ. ಅಂತಿಮವಾಗಿ ಪಾದಯಾತ್ರೆ, ಬಳ್ಳಾರಿ ನಗರವನ್ನು ತಲುಪಿದೆ. ಹೀಗಾಗಿ ಪಾದಯಾತ್ರೆ ಸಾಗಿದ ಪ್ರಮುಖ ಕ್ಷೇತ್ರಗಳ ಪೈಕಿ ಕಾಂಗ್ರೆಸ್ ಬಲವೇ ಹೆಚ್ಚಾಗಿ ಕಾಣಿಸುತ್ತಿದೆ.

ಬಳ್ಳಾರಿಯಲ್ಲಿ ಹಳೆಯ ಪೈಪೋಟಿಗೆ ಹೊಸ ಆಯಾಮ

ಬಳ್ಳಾರಿ ಜಿಲ್ಲೆಯಲ್ಲಿ ಈಗಾಗಲೇ ಕಾಂಗ್ರೆಸ್ ಹಾಗೂ ಬಿಜೆಪಿಯ ಪ್ರಮುಖ ನಾಯಕರ ನಡುವೆ ರಾಜಕೀಯ ಪೈಪೋಟಿ ತೀವ್ರವಾಗಿದೆ. ಮಾಜಿ ಸಚಿವ ಬಿ.ನಾಗೇಂದ್ರ ಹಾಗೂ ಬಿಜೆಪಿಯ ಶ್ರೀರಾಮುಲು ನಡುವೆ, ಮಾಜಿ ಸಚಿವ ಜನಾರ್ದನ ರೆಡ್ಡಿ ಹಾಗೂ ಕಾಂಗ್ರೆಸ್‌ನ ನಾರಾ ಭರತ್ ರೆಡ್ಡಿ ನಡುವೆ, ಕಾಂಗ್ರೆಸ್‌ನ ಅನ್ನಪೂರ್ಣ ಹಾಗೂ ಬಿಜೆಪಿಯ ಬಂಗಾರು ಹನುಮಂತ ಅವರ ನಡುವೆ ನಡೆಯುತ್ತಿರುವ ರಾಜಕೀಯ ಪೈಪೋಟಿ ಮುಂದಿನ ದಿನಗಳಲ್ಲಿ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ.

ಇಂತಹ ರಾಜಕೀಯ ಸಮೀಕರಣಗಳ ನಡುವೆ ಬಿಜೆಪಿ ನಡೆಸುತ್ತಿರುವ ಬಳ್ಳಾರಿ ಚಲೋ ಕೇವಲ ಸರ್ಕಾರದ ವಿರುದ್ಧದ ಹೋರಾಟವಾಗಿಯೇ ಉಳಿಯುತ್ತದೆಯೇ ಅಥವಾ ಮುಂಬರುವ ಚುನಾವಣೆಯ ರಾಜಕೀಯ ಲೆಕ್ಕಾಚಾರವನ್ನೇ ಬದಲಿಸುವ ಪ್ರಯತ್ನವಾಗುತ್ತದೆಯೇ ಎಂಬ ಪ್ರಶ್ನೆ ಮೂಡಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ವಿಚಾರದಲ್ಲಿ ಬಿ.ನಾಗೇಂದ್ರ, ರಾಜೀನಾಮೆ ನೀಡಿದ ಬಳಿಕವೂ ಬಿಜೆಪಿ ಪಾದಯಾತ್ರೆ ಮುಂದುವರಿಸಿರುವುದು ರಾಜಕೀಯವಾಗಿ ಗಮನ ಸೆಳೆದಿದೆ. ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ವಿಚಾರವನ್ನೇ ಹೋರಾಟದ ಅಂತ್ಯವೆಂದು ಪರಿಗಣಿಸದೆ, ಸರ್ಕಾರದ ವಿರುದ್ಧ ಜನಾಭಿಪ್ರಾಯ ರೂಪಿಸುವ ವೇದಿಕೆಯನ್ನಾಗಿ ಬಿಜೆಪಿ ಪಾದಯಾತ್ರೆಯನ್ನು ಬಳಸಿಕೊಳ್ಳಲು ಮುಂದಾಗಿದೆ.

ಸರ್ಕಾರದ ವಿರುದ್ಧ ಜನರಲ್ಲಿ ಅಸಮಾಧಾನ ಮೂಡಿಸುವುದು, ಪಕ್ಷದ ಕಾರ್ಯಕರ್ತರನ್ನು ಸಂಘಟಿಸುವುದು ಹಾಗೂ ಮುಂಬರುವ ಚುನಾವಣೆಗೆ ಮುನ್ನ ಪಕ್ಷದ ನೆಲೆಯನ್ನು ಬಲಪಡಿಸುವುದು ಬಿಜೆಪಿ ಹೋರಾಟದ ಪ್ರಮುಖ ರಾಜಕೀಯ ಉದ್ದೇಶವಾಗಿದೆ ಎಂಬ ವಿಶ್ಲೇಷಣೆ ಕೇಳಿಬರುತ್ತಿದೆ.

ಅಧಿಕಾರಕ್ಕಾಗಿ ಹೋರಾಟವಲ್ಲ ಎನ್ನುತ್ತಿರುವ ಬಿಜೆಪಿ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ನಡೆಯುತ್ತಿರುವ ಈ ಹೋರಾಟ ಅಧಿಕಾರಕ್ಕಾಗಿ ನಡೆಯುತ್ತಿರುವ ಹೋರಾಟವಲ್ಲ. ರಾಜ್ಯದ ಜನರ ಹಿತಕ್ಕಾಗಿ, ರೈತರ ಬದುಕಿಗಾಗಿ, ಯುವಕರ ಭವಿಷ್ಯಕ್ಕಾಗಿ ಹಾಗೂ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ನಡೆಯುತ್ತಿರುವ ಹೋರಾಟ ಎಂದು ಬಿಜೆಪಿ ಮುಖಂಡರು ಸಮರ್ಥಿಸಿಕೊಂಡಿದ್ದಾರೆ.

ಸರ್ಕಾರದ ವೈಫಲ್ಯಗಳನ್ನು ಜನರ ಮುಂದೆ ತೆರೆದಿಡುವ ಮೂಲಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನಾಂದೋಲನ ರೂಪಿಸುವುದು ತಮ್ಮ ಉದ್ದೇಶವಾಗಿದೆ ಎಂದು ಬಿಜೆಪಿ ನಾಯಕರು ಹೇಳುತ್ತಿದ್ದಾರೆ. ಹೀಗಾಗಿ ಪಾದಯಾತ್ರೆಯನ್ನು ಕೇವಲ ರಾಜಕೀಯ ಕಾರ್ಯಕ್ರಮವಾಗಿ ನೋಡದೆ, ಸರ್ಕಾರದ ವಿರುದ್ಧದ ಜನಾಂದೋಲನ ಎಂದು ಬಿಂಬಿಸಲು ಬಿಜೆಪಿ ಪ್ರಯತ್ನಿಸುತ್ತಿದೆ.

ಕಾಂಗ್ರೆಸ್‌ಗೆ ಕೌಂಟರ್ ಸವಾಲು

ಬಿಜೆಪಿಯ ಬಳ್ಳಾರಿ ಚಲೋಗೆ ಕಾಂಗ್ರೆಸ್ ಯಾವ ರೀತಿಯಲ್ಲಿ ಪ್ರತಿಕ್ರಿಯಿಸಲಿದೆ ಎಂಬುದು ಕೂಡ ಕುತೂಹಲ ಮೂಡಿಸಿದೆ. ಕಾಂಗ್ರೆಸ್ ಈಗಾಗಲೇ ಬಳ್ಳಾರಿ ಜಿಲ್ಲೆಯಲ್ಲಿ ತನ್ನ ರಾಜಕೀಯ ಪ್ರಾಬಲ್ಯವನ್ನು ಸಾಬೀತುಪಡಿಸಿದೆ. ಐದು ವಿಧಾನಸಭಾ ಕ್ಷೇತ್ರಗಳ ಗೆಲುವು, ಲೋಕಸಭಾ ಚುನಾವಣೆಯ ಫಲಿತಾಂಶ ಹಾಗೂ ಸಂಡೂರು ಉಪಚುನಾವಣೆಯ ಗೆಲುವು ಕಾಂಗ್ರೆಸ್‌ಗೆ ಬಲ ನೀಡಿವೆ.

ಆದರೆ ನಿರಂತರವಾಗಿ ನಡೆಯುವ ರಾಜಕೀಯ ಹೋರಾಟಗಳು ಜನಾಭಿಪ್ರಾಯದ ಮೇಲೆ ಪರಿಣಾಮ ಬೀರಿದರೆ, ಮುಂದಿನ ಚುನಾವಣೆಯಲ್ಲಿ ಅದರ ಪ್ರತಿಫಲ ಕಂಡುಬರುವ ಸಾಧ್ಯತೆಯೂ ಇದೆ. ಹೀಗಾಗಿ ಬಿಜೆಪಿ ಪಾದಯಾತ್ರೆಯನ್ನು ಕಾಂಗ್ರೆಸ್ ನಿರ್ಲಕ್ಷಿಸುತ್ತದೆಯೇ ಅಥವಾ ಸರ್ಕಾರದ ಸಾಧನೆಗಳನ್ನು ಮುಂದಿಟ್ಟುಕೊಂಡು ಕೌಂಟರ್ ತಂತ್ರ ರೂಪಿಸುತ್ತದೆಯೇ ಎಂಬುದು ಮುಂದಿನ ದಿನಗಳಲ್ಲಿ ಸ್ಪಷ್ಟವಾಗಬೇಕಿದೆ.

ಪಾದಯಾತ್ರೆ ಯಾರಿಗೆ ಲಾಭ?

ಸೆ.1ರಿಂದ 10ರವರೆಗೆ ಲಿಂಗಸುಗೂರಿನಿಂದ ಬಳ್ಳಾರಿ ನಗರದವರೆಗೆ ನಡೆದಿರುವ ಈ ಪಾದಯಾತ್ರೆ ಹಲವು ವಿಧಾನಸಭಾ ಕ್ಷೇತ್ರಗಳನ್ನು ಹಾದು ಬಂದಿದೆ. ಈ ಮಾರ್ಗದಲ್ಲಿ ಕಾಂಗ್ರೆಸ್ ಪ್ರಾಬಲ್ಯ ಹೊಂದಿರುವ ಕ್ಷೇತ್ರಗಳೇ ಹೆಚ್ಚಿನ ಸಂಖ್ಯೆಯಲ್ಲಿರುವುದು ಗಮನಾರ್ಹ.



ಹೀಗಾಗಿ ಬಿಜೆಪಿ ತನ್ನ ಸಂಘಟನಾ ಶಕ್ತಿಯನ್ನು ಪ್ರದರ್ಶಿಸುವುದರ ಜತೆಗೆ ಕಾಂಗ್ರೆಸ್ ಭದ್ರಕೋಟೆಯಲ್ಲೇ ತನ್ನ ಅಸ್ತಿತ್ವವನ್ನು ತೋರಿಸುವ ಪ್ರಯತ್ನ ಮಾಡಿದೆ. ಆದರೆ ಪಾದಯಾತ್ರೆಯಲ್ಲಿ ಕಾಣಿಸಿಕೊಳ್ಳುವ ಜನಬೆಂಬಲವೇ ಚುನಾವಣೆಯ ಮತವಾಗಿ ಪರಿವರ್ತನೆಯಾಗುತ್ತದೆಯೇ ಎಂಬುದು ಪ್ರಮುಖ ಪ್ರಶ್ನೆಯಾಗಿದೆ.

ಪ್ರಸ್ತುತ ರಾಜಕೀಯ ಲೆಕ್ಕಾಚಾರದಲ್ಲಿ ಬಳ್ಳಾರಿ ಕಾಂಗ್ರೆಸ್‌ನ ಭದ್ರಕೋಟೆಯಂತಿದೆ. ಆದರೆ ರಾಜಕೀಯದಲ್ಲಿ ಯಾವುದೇ ಕೋಟೆ ಶಾಶ್ವತವಲ್ಲ. ಜನರ ಸಮಸ್ಯೆಗಳು, ಸರ್ಕಾರದ ಆಡಳಿತ, ಸ್ಥಳೀಯ ನಾಯಕರ ವರ್ಚಸ್ಸು ಹಾಗೂ ಪಕ್ಷಗಳ ಸಂಘಟನಾ ಸಾಮರ್ಥ್ಯಗಳು ಚುನಾವಣಾ ಫಲಿತಾಂಶವನ್ನು ನಿರ್ಧರಿಸುತ್ತವೆ.

ಹೀಗಾಗಿ ಬಳ್ಳಾರಿ ಚಲೋ ಕಾಂಗ್ರೆಸ್‌ನ ಭದ್ರಕೋಟೆಗೆ ಬಿರುಕು ಮೂಡಿಸುವ ಬಿಜೆಪಿಯ ಹೆಜ್ಜೆಯಾಗುತ್ತದೆಯೇ? ಅಥವಾ ಕಾಂಗ್ರೆಸ್ ತನ್ನ ಸಂಘಟನಾ ಬಲದಿಂದ ಈ ಹೋರಾಟಕ್ಕೆ ಕೌಂಟರ್ ನೀಡಿ ಪ್ರಾಬಲ್ಯವನ್ನು ಉಳಿಸಿಕೊಳ್ಳುತ್ತದೆಯೇ? ಎಂಬುದಕ್ಕೆ ಮುಂದಿನ ಚುನಾವಣೆಗಳೇ ಉತ್ತರ ನೀಡಬೇಕಿದೆ.

ಒಟ್ಟಿನಲ್ಲಿ, ಕಾಂಗ್ರೆಸ್ ಸತತ ಗೆಲುವುಗಳ ಮೂಲಕ ತನ್ನ ಪ್ರಾಬಲ್ಯವನ್ನು ತೋರಿಸಿರುವ ಬಳ್ಳಾರಿ ಜಿಲ್ಲೆಯಲ್ಲಿ ಬಿಜೆಪಿ ಇದೀಗ ಪಾದಯಾತ್ರೆಯ ಮೂಲಕ ರಾಜಕೀಯ ಸಮರಕ್ಕೆ ಇಳಿದಿದೆ. ಈ ಪಾದಯಾತ್ರೆ ತಕ್ಷಣದ ರಾಜಕೀಯ ಚರ್ಚೆಗೆ ಮಾತ್ರ ಸೀಮಿತವಾಗುತ್ತದೆಯೇ ಅಥವಾ ಮುಂಬರುವ ಚುನಾವಣೆಯ ಫಲಿತಾಂಶದ ಮೇಲೆ ಪರಿಣಾಮ ಬೀರುವಷ್ಟು ಜನಾಭಿಪ್ರಾಯವನ್ನು ರೂಪಿಸುತ್ತದೆಯೇ ಎಂಬುದನ್ನು ಕಾದು ನೋಡಬೇಕಿದೆ.

ಶ್ರೀರಾಮುಲು ಮುನ್ನೆಲೆಗೆ: ಎಸ್‌ಟಿ ಮತಗಳ ಮೇಲೆ ಬಿಜೆಪಿಯ ಕಣ್ಣು?

ಬಳ್ಳಾರಿ ಚಲೋ ಪಾದಯಾತ್ರೆಯ ಹಿಂದೆ ಬಿಜೆಪಿಯ ಮತ್ತೊಂದು ಪ್ರಮುಖ ರಾಜಕೀಯ ಲೆಕ್ಕಾಚಾರವೂ ಇದೆ ಎನ್ನಲಾಗುತ್ತಿದೆ. ಕಲ್ಯಾಣ ಕರ್ನಾಟಕದಲ್ಲಿ ಎಸ್‌ಟಿ ಮತಗಳು ಇತ್ತೀಚಿನ ಚುನಾವಣೆಯಲ್ಲಿ ಕಾಂಗ್ರೆಸ್ ಪರ ವಾಲಿರುವ ಹಿನ್ನೆಲೆಯಲ್ಲಿ, ಈ ಮತಬ್ಯಾಂಕ್ ಅನ್ನು ಮತ್ತೆ ತನ್ನತ್ತ ಸೆಳೆಯಲು ಬಿಜೆಪಿ ಪ್ರಯತ್ನಿಸುತ್ತಿದೆ. ಅದರಲ್ಲೂ ಎಸ್‌ಟಿ ಸಮುದಾಯದಲ್ಲಿ ಪ್ರಭಾವ ಹೊಂದಿರುವ ಮಾಜಿ ಸಚಿವ ಶ್ರೀರಾಮುಲು ಅವರನ್ನು ಪಾದಯಾತ್ರೆಯಲ್ಲಿ ಮುನ್ನಲೆಗೆ ತರುವ ಮೂಲಕ ಬಿಜೆಪಿಯು ತನ್ನ ಹಳೆಯ ಸಾಮಾಜಿಕ ನೆಲೆಯನ್ನು ಪುನಃ ಗಟ್ಟಿಗೊಳಿಸುವ ತಂತ್ರ ರೂಪಿಸಿದೆ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ನಡೆಯುತ್ತಿದೆ.

ಬಳ್ಳಾರಿ ಜಿಲ್ಲೆ ಸೇರಿದಂತೆ ರಾಯಚೂರು, ಕೊಪ್ಪಳ ಹಾಗೂ, ವಿಜಯನಗರ ಭಾಗದಲ್ಲಿ ಎಸ್‌ಟಿ ಸಮುದಾಯದ ರಾಜಕೀಯ ಪ್ರಭಾವ ದೊಡ್ಡದಾಗಿದೆ. ಎಸ್ ಟಿ ಮೀಸಲು ಕ್ಷೇತ್ರಗಳಲ್ಲಿ ಶ್ರೀರಾಮುಲು ಅವರ ರಾಜಕೀಯ ಪ್ರಭಾವವನ್ನು ಬಿಜೆಪಿ ಬಳಸಿಕೊಳ್ಳಲು ಮುಂದಾಗಿರುವುದು ಈ ಪಾದಯಾತ್ರೆಯ ಪ್ರಮುಖ ಅಂಶವೆಂದು ವಿಶ್ಲೇಷಿಸಲಾಗುತ್ತಿದೆ. ಕಾಂಗ್ರೆಸ್ ತನ್ನತ್ತ ಸೆಳೆದಿರುವ ಎಸ್‌ಟಿ ಮತಗಳನ್ನು ಮರಳಿ ಪಡೆಯಲು ಬಿಜೆಪಿ ಇದೀಗ ಹೋರಾಟದ ವೇದಿಕೆಯನ್ನೇ ರಾಜಕೀಯ ಸಂಘಟನೆಯ ವೇದಿಕೆಯನ್ನಾಗಿ ಮಾಡಿಕೊಳ್ಳುತ್ತಿದೆಯೇ ಎಂಬ ಪ್ರಶ್ನೆ ಮೂಡಿದೆ

ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಎಸ್‌ಟಿ ಮತಗಳು ಅಭ್ಯರ್ಥಿಗಳ ಗೆಲುವು-ಸೋಲನ್ನು ನಿರ್ಧರಿಸುವಷ್ಟು ಮಹತ್ವ ಹೊಂದಿವೆ. ಹೀಗಾಗಿ ಕಾಂಗ್ರೆಸ್ ಪರ ವಾಲಿರುವ ಈ ಮತಬ್ಯಾಂಕ್ ಅನ್ನು ಮತ್ತೆ ತನ್ನತ್ತ ಸೆಳೆಯಲು ಬಿಜೆಪಿ ಪಾದಯಾತ್ರೆಯ ಮೂಲಕ ಸರ್ಕಾರದ ವಿರುದ್ಧದ ಅಸಮಾಧಾನವನ್ನು ರಾಜಕೀಯವಾಗಿ ಬಳಸಿಕೊಳ್ಳಲು ಮುಂದಾಗಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ನಡೆಸುತ್ತಿರುವ ಹೋರಾಟವೂ ಎಸ್‌ಟಿ ಸಮುದಾಯದೊಂದಿಗೆ ನೇರವಾಗಿ ಸಂಪರ್ಕ ಹೊಂದಿರುವ ವಿಷಯವಾಗಿದೆ. ಹೀಗಾಗಿ ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆಯ ನಂತರವೂ ಹೋರಾಟ ಮುಂದುವರಿಸಿರುವ ಬಿಜೆಪಿ, ಎಸ್‌ಟಿ ಸಮುದಾಯದ ಸಮಸ್ಯೆಗಳು, ಅಭಿವೃದ್ಧಿ ಹಾಗೂ ಸರ್ಕಾರದ ವೈಫಲ್ಯಗಳನ್ನು ಮುಂದಿಟ್ಟುಕೊಂಡು ತನ್ನ ರಾಜಕೀಯ ನೆಲೆ ವಿಸ್ತರಿಸಲು ಪ್ರಯತ್ನಿಸುತ್ತಿದೆ ಎನ್ನಲಾಗಿದೆ.

ವಿಜಯೇಂದ್ರ ನಾಯಕತ್ವಕ್ಕೆ ಪಾದಯಾತ್ರೆ ಶಕ್ತಿ ಪ್ರದರ್ಶನ?

ಇದರ ನಡುವೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ನಾಯಕತ್ವದ ಬಗ್ಗೆಯೂ ಪಕ್ಷದೊಳಗೆ ಚರ್ಚೆಗಳು ನಡೆಯುತ್ತಿದ್ದವು ಎನ್ನಲಾಗಿತ್ತು. ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಅವರನ್ನು ಕೆಳಗಿಳಿಸುವ ಕುರಿತು ಬಿಜೆಪಿಯಲ್ಲೇ ಗುಸು ಗುಸು ಚರ್ಚೆಗಳು ನಡೆದಿದ್ದವು ಎಂಬ ಮಾತುಗಳು ಕೇಳಿಬಂದಿದ್ದವು.

ಇಂತಹ ಸಂದರ್ಭದಲ್ಲಿ ಬಳ್ಳಾರಿ ಚಲೋ ಪಾದಯಾತ್ರೆ ವಿಜಯೇಂದ್ರ ಅವರಿಗೆ ತಮ್ಮ ನಾಯಕತ್ವದ ಸಾಮರ್ಥ್ಯ ಮತ್ತು ಸಂಘಟನಾ ಶಕ್ತಿಯನ್ನು ಪ್ರದರ್ಶಿಸುವ ಪ್ರಮುಖ ವೇದಿಕೆಯಾಗಿ ಪರಿಣಮಿಸಿದೆ ಎಂಬ ವಿಶ್ಲೇಷಣೆ ಕೇಳಿಬರುತ್ತಿದೆ. ಆಂತರಿಕ ನಾಯಕತ್ವದ ಚರ್ಚೆಗಳನ್ನು ಬದಿಗೊತ್ತಿ, ಪಕ್ಷದ ಕಾರ್ಯಕರ್ತರನ್ನು ಒಗ್ಗೂಡಿಸಿ, ದೊಡ್ಡ ಮಟ್ಟದ ಹೋರಾಟ ನಡೆಸುವ ಮೂಲಕ ತಮ್ಮ ನಾಯಕತ್ವದ ಮೇಲೆ ವಿಶ್ವಾಸ ಮೂಡಿಸುವ ಪ್ರಯತ್ನವನ್ನು ವಿಜಯೇಂದ್ರ ಮಾಡಿದ್ದಾರೆ ಎನ್ನಲಾಗುತ್ತಿದೆ.

ಪಾದಯಾತ್ರೆಯುದ್ದಕ್ಕೂ ವಿಜಯೇಂದ್ರ ಅವರು ಕೇವಲ ರಾಜಕೀಯ ಭಾಷಣಗಳಿಗೆ ಸೀಮಿತವಾಗದೆ ವಿವಿಧ ವರ್ಗಗಳೊಂದಿಗೆ ನೇರವಾಗಿ ಬೆರೆಯುವ ಪ್ರಯತ್ನ ನಡೆಸಿದರು. ವಿದ್ಯಾರ್ಥಿಗಳೊಂದಿಗೆ ಸಂವಾದ, ರೈತರೊಂದಿಗೆ ಊಟ ಸೇರಿದಂತೆ ವಿಭಿನ್ನ ರೀತಿಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಜನರೊಂದಿಗೆ ಸಂಪರ್ಕ ಸಾಧಿಸುವ ಸಂದೇಶ ನೀಡಿದರು. ಈ ಮೂಲಕ ಪಾದಯಾತ್ರೆಯನ್ನು ಕೇವಲ ಸರ್ಕಾರದ ವಿರುದ್ಧದ ಪ್ರತಿಭಟನೆಯಾಗಿರದೆ, ಪಕ್ಷದ ಸಂಘಟನಾ ಶಕ್ತಿ ಹಾಗೂ ತಮ್ಮ ನಾಯಕತ್ವ ಪ್ರದರ್ಶನದ ವೇದಿಕೆಯನ್ನಾಗಿ ರೂಪಿಸಲು ವಿಜಯೇಂದ್ರ ಮುಂದಾದರು ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಒಂದೇ ಪಾದಯಾತ್ರೆ, ಹಲವು ರಾಜಕೀಯ ಲೆಕ್ಕಾಚಾರ: ಹೀಗಾಗಿ ಬಳ್ಳಾರಿ ಚಲೋ ಪಾದಯಾತ್ರೆಯನ್ನು ಕೇವಲ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ವಿರುದ್ಧದ ಹೋರಾಟ ಎಂದು ಮಾತ್ರ ನೋಡುವಂತಿಲ್ಲ. ಒಂದು ಕಡೆ ಕಾಂಗ್ರೆಸ್ ಪರ ವಾಲಿರುವ ಎಸ್‌ಟಿ ಮತಗಳನ್ನು ಮತ್ತೆ ಬಿಜೆಪಿಯತ್ತ ಸೆಳೆಯುವ ಪ್ರಯತ್ನ, ಮತ್ತೊಂದೆಡೆ ಶ್ರೀರಾಮುಲು ಅವರನ್ನು ಮುನ್ನಲೆಗೆ ತಂದು ಬಳ್ಳಾರಿ ಭಾಗದಲ್ಲಿ ಪಕ್ಷದ ಹಳೆಯ ರಾಜಕೀಯ ಪ್ರಭಾವವನ್ನು ಪುನರುಜ್ಜೀವನಗೊಳಿಸುವ ತಂತ್ರ, ಇನ್ನೊಂದೆಡೆ ಪಕ್ಷದೊಳಗಿನ ನಾಯಕತ್ವದ ಚರ್ಚೆಗಳ ನಡುವೆಯೇ ವಿಜಯೇಂದ್ರ ಅವರ ಶಕ್ತಿ ಪ್ರದರ್ಶನಇವೆಲ್ಲವೂ ಪಾದಯಾತ್ರೆಯ ರಾಜಕೀಯ ಲೆಕ್ಕಾಚಾರದಲ್ಲಿ ಸೇರಿಕೊಂಡಿವೆ.

ಆದರೆ ಪಾದಯಾತ್ರೆಯಲ್ಲಿ ಕಂಡುಬರುವ ಜನಬೆಂಬಲ ಚುನಾವಣೆಯ ಮತಗಳಾಗಿ ಪರಿವರ್ತನೆಯಾಗುತ್ತದೆಯೇ ಎಂಬುದು ದೊಡ್ಡ ಪ್ರಶ್ನೆ. ಎಸ್‌ಟಿ ಸಮುದಾಯದ ಮತಗಳು ಮತ್ತೆ ಬಿಜೆಪಿಯತ್ತ ವಾಲುತ್ತವೆಯೇ? ಶ್ರೀರಾಮುಲು ಅವರ ವರ್ಚಸ್ಸ ನ್ನು ಬಿಜೆಪಿ ಎಷ್ಟರ ಮಟ್ಟಿಗೆ ಬಳಸಿಕೊಳ್ಳಲಿದೆ? ವಿಜಯೇಂದ್ರ ಅವರ ನಾಯಕತ್ವದ ಬಗ್ಗೆ ಪಕ್ಷದೊಳಗಿನ ಗುಸು ಗುಸು ಇದರಿಂದ ಶಮನವಾಗುತ್ತದೆಯೇ? ಕಾಂಗ್ರೆಸ್ ಇದಕ್ಕೆ ಯಾವ ರೀತಿಯ ಕೌಂಟರ್ ನೀಡಲಿದೆ? ಎಂಬ ಪ್ರಶ್ನೆ ಉದ್ಭವಿಸಿದೆ.

ಜೆಡಿಎಸ್ ಗೈರು: ಮೈತ್ರಿಯೊಳಗಿನ ಸಮನ್ವಯದ ಕೊರತೆ?

ಬಳ್ಳಾರಿ ಚಲೋ ಪಾದಯಾತ್ರೆಯ ಮತ್ತೊಂದು ಗಮನಾರ್ಹ ಸಂಗತಿಯೆಂದರೆ ಬಿಜೆಪಿ-ಜೆಡಿಎಸ್ ಮೈತ್ರಿ ಇದ್ದರೂ ಜೆಡಿಎಸ್ ನಾಯಕರು ಹಾಗೂ ಕಾರ್ಯಕರ್ತರು ನಿರೀಕ್ಷಿತ ಪ್ರಮಾಣದಲ್ಲಿ ಭಾಗಿಯಾಗದಿರುವುದು. ಬಿಜೆಪಿ ಪಾದಯಾತ್ರೆ ಕುರಿತು ಜೆಡಿಎಸ್ ರಾಜ್ಯ ನಾಯಕತ್ವದೊಂದಿಗೆ ಸಮರ್ಪಕವಾಗಿ ಚರ್ಚಿಸಿಲ್ಲ ಎಂಬ ಅಸಮಾಧಾನವೂ ಜೆಡಿಎಸ್ ವಲಯದಲ್ಲಿ ವ್ಯಕ್ತವಾಗಿದೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರೂ ಪಾದಯಾತ್ರೆ ಕುರಿತು ತಮ್ಮೊಂದಿಗೆ ಚರ್ಚಿಸಿಲ್ಲ ಎಂಬ ರೀತಿಯಲ್ಲಿ ಪ್ರತಿಕ್ರಿಯಿಸಿರುವುದು ಮೈತ್ರಿ ಪಕ್ಷಗಳ ನಡುವಿನ ಸಮನ್ವಯದ ಪ್ರಶ್ನೆಯನ್ನು ಮುನ್ನೆಲೆಗೆ ತಂದಿದೆ.

ಬಿಜೆಪಿ-ಜೆಡಿಎಸ್ ಮೈತ್ರಿ ಮುಂದುವರಿದಿದ್ದರೂ, ಪಾದಯಾತ್ರೆಯಲ್ಲಿ ಜೆಡಿಎಸ್ ಗೈರು ಆಗಿರುವುದು ಸ್ಥಳೀಯ ಮಟ್ಟದಲ್ಲಿಯೂ ಚರ್ಚೆಗೆ ಕಾರಣವಾಗಿದೆ. ವಿಶೇಷವಾಗಿ ಪಾದಯಾತ್ರೆ ಸಾಗಿದ ಪ್ರದೇಶಗಳಲ್ಲಿನ ಜೆಡಿಎಸ್ ನಾಯಕರು ಮತ್ತು ಕಾರ್ಯಕರ್ತರಲ್ಲಿ, ಮೈತ್ರಿ ಇದ್ದರೂ ತಮ್ಮ ಪಕ್ಷವನ್ನು ಹೋರಾಟದಿಂದ ದೂರ ಇಡಲಾಗಿದೆಯೇ? ಎಂಬ ಅನುಮಾನ ಮೂಡಿದೆ.

ಜೆಡಿಎಸ್ ಮತಬ್ಯಾಂಕ್ ಬಿಜೆಪಿಗೆ ಮುಳ್ಳಾಗುತ್ತದೆಯೇ?

ಮುಂಬರುವ ಚುನಾವಣೆಯ ಲೆಕ್ಕಾಚಾರದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಗೆ ಎರಡೂ ಪಕ್ಷಗಳ ಮತಬ್ಯಾಂಕ್ ಅತ್ಯಂತ ಪ್ರಮುಖ. ಕಾಂಗ್ರೆಸ್ ವಿರುದ್ಧದ ಮತಗಳು ವಿಭಜನೆಯಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಮೈತ್ರಿ ಮಾಡಿಕೊಂಡಿರುವ ಸಂದರ್ಭದಲ್ಲಿ, ನೆಲಮಟ್ಟದಲ್ಲಿ ಎರಡೂ ಪಕ್ಷಗಳ ನಡುವೆ ಸಮನ್ವಯದ ಕೊರತೆ ಉಂಟಾದರೆ ಅದರ ಪರಿಣಾಮ ಚುನಾವಣೆಯಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆ ಇದೆ.

ಬಳ್ಳಾರಿ ಚಲೋ ಮೂಲಕ ಬಿಜೆಪಿ ತನ್ನ ಸಂಘಟನಾ ಶಕ್ತಿಯನ್ನು ಪ್ರದರ್ಶಿಸಿದರೂ, ಜೆಡಿಎಸ್ ಕಾರ್ಯಕರ್ತರು ಹಾಗೂ ಮತದಾರರು ಇದೇ ಉತ್ಸಾಹದಲ್ಲಿ ಬಿಜೆಪಿಯೊಂದಿಗೆ ನಿಲ್ಲುತ್ತಾರೆಯೇ ಎಂಬುದು ಪ್ರಶ್ನೆಯಾಗಿದೆ. ಒಂದು ವೇಳೆ ಜೆಡಿಎಸ್ ಮತಬ್ಯಾಂಕ್ ನಿರೀಕ್ಷಿತ ರೀತಿಯಲ್ಲಿ ಬಿಜೆಪಿಯೊಂದಿಗೆ ವರ್ಗಾವಣೆಯಾಗದಿದ್ದರೆ, ಕಾಂಗ್ರೆಸ್ ವಿರುದ್ಧದ ಮತಗಳ ಒಗ್ಗೂಡಿಸುವಿಕೆಯ ಬಿಜೆಪಿ ಲೆಕ್ಕಾಚಾರಕ್ಕೆ ಅದು ದೊಡ್ಡ ಸವಾಲಾಗಬಹುದು.

ಹೀಗಾಗಿ ಬಳ್ಳಾರಿ ಚಲೋ ಮೂಲಕ ಬಿಜೆಪಿ ತನ್ನ ಶಕ್ತಿ ತೋರಿಸಿದರೂ, ಮೈತ್ರಿ ಪಕ್ಷ ಜೆಡಿಎಸ್‌ನ ಮತಬ್ಯಾಂಕ್ ಚುನಾವಣೆಯಲ್ಲಿ ಬಿಜೆಪಿಗೆ ಎಷ್ಟು ಮಟ್ಟಿಗೆ ವರ್ಗಾವಣೆಯಾಗಲಿದೆ? ಅಥವಾ ಇದೇ ಮತಬ್ಯಾಂಕ್ ಬಿಜೆಪಿಗೆ ಮುಳ್ಳಾಗಿ ಪರಿಣಮಿಸಲಿದೆಯೇ? ಎಂಬುದು ಮುಂದಿನ ಚುನಾವಣೆಯ ಪ್ರಮುಖ ರಾಜಕೀಯ ಪ್ರಶ್ನೆಗಳಲ್ಲಿ ಒಂದಾಗಿದೆ.

ಒಂದೆಡೆ ಎಸ್‌ಟಿ ಮತಗಳನ್ನು ಮರಳಿ ಸೆಳೆಯಲು ಶ್ರೀರಾಮುಲು ಅವರನ್ನು ಮುನ್ನಲೆಗೆ ತರುವ ಬಿಜೆಪಿ ತಂತ್ರ, ಮತ್ತೊಂದೆಡೆ ವಿಜಯೇಂದ್ರ ಅವರ ನಾಯಕತ್ವದ ಶಕ್ತಿ ಪ್ರದರ್ಶನ, ಇನ್ನೊಂದೆಡೆ ಮೈತ್ರಿ ಪಕ್ಷ ಜೆಡಿಎಸ್‌ನ ಪಾದಯಾತ್ರೆ ಗೈರುಈ ಮೂರು ಬೆಳವಣಿಗೆಗಳು ಬಳ್ಳಾರಿ ಚಲೋಗೆ ಕೇವಲ ಸರ್ಕಾರ ವಿರೋಧಿ ಹೋರಾಟದ ಸ್ವರೂಪವನ್ನಷ್ಟೇ ನೀಡದೆ, ಬಿಜೆಪಿಯ ಮುಂದಿನ ಚುನಾವಣಾ ರಾಜಕೀಯದ ಒಳ ಲೆಕ್ಕಾಚಾರವನ್ನೂ ಬಯಲು ಮಾಡಿವೆ. ಆದರೆ ಈ ರಾಜಕೀಯ ತಂತ್ರಗಳು ಮತಗಳಾಗಿ ಪರಿವರ್ತನೆಯಾಗುತ್ತವೆಯೇ? ಕಾಂಗ್ರೆಸ್‌ನ ಭದ್ರಕೋಟೆಯಲ್ಲಿ ಬಿಜೆಪಿ ಬಿರುಕು ಮೂಡಿಸಲಿದೆಯೇ? ಜೆಡಿಎಸ್ ಮತಬ್ಯಾಂಕ್ ಬಿಜೆಪಿಗೆ ಬಲವಾಗಲಿದೆಯೇ ಅಥವಾ ಮುಳ್ಳಾಗಲಿದೆಯೇ? ಎಂಬುದಕ್ಕೆ ಮುಂದಿನ ಚುನಾವಣೆಯ ಫಲಿತಾಂಶವೇ ಅಂತಿಮ ಉತ್ತರ ನೀಡಲಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR